ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 16

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಶನಿವಾರ: 20-12-2025

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

## ಸಂಸತ್‌ನಲ್ಲಿ ಜಿ ರಾಮ್ ಜಿ ಮಸೂದೆ ಅಂಗೀಕಾರ

**ನವದೆಹಲಿ, ಡಿ.19–** ದೇಶದಲ್ಲಿ ಎರಡು ದಶಕಗಳಷ್ಟು ಹಳೆಯದಾದ ಮನ್ರೇಗಾ ಹೆಸರನ್ನು ಜಿ ರಾಮ್ ಜಿ ಎಂದು ಹೆಸರು ಬದಲಾಯಿಸುವ ಮಸೂದೆಗೆ ವಿರೋಧ ಪಕ್ಷಗಳ ತೀವ್ರ ವಿರೋದದ ನಡುವೆಯೂ ಸಂಸತ್ತಿನಲ್ಲಿ ಅಂಗೀಕಾರಗೊಂಡಿದೆ.

ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ– ಮನ್ರೇಗಾ ಇನ್ನು ಮುಂದೆ ಉದ್ಯೋಗ ಮತ್ತು ಜೀವನೋಪಾಯ ಮಿಷನ್ ಗ್ರಾಮೀಣ ಮಸೂದೆ – ಜಿ ರಾಮ್ ಜಿ ಎಂದು ಕರೆಯಲು ಸಂಸತ್ತಿನ ಉಭಯ ಸದನಗಳಲ್ಲಿ ಅಂಗೀಕಾರ ಸಿಕ್ಕಿದೆ.

100 ದಿನಗಳ ಮಾನವ ದಿನಗಳ ಬದಲಿಗೆ ವಾರ್ಷಿಕವಾಗಿ 125 ದಿನಗಳ ಗ್ರಾಮೀಣ ಕೂಲಿ ಉದ್ಯೋಗದ ಭರವಸೆ ನೀಡುವ ಜಿ ರಾಮ್ ಜಿ ಮೂಲಕ ಉದ್ಯೋಗ ಕಲ್ಪಿಸುವ ಭರವಸೆಯನ್ನು ಕೇಂದ್ರ ಸರ್ಕಾರ ನೀಡಿದೆ. ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮಾತನಾಡಿ, ಅಸ್ತಿತ್ವದಲ್ಲಿರುವ ಯೋಜನೆಯಲ್ಲಿನ ರಚನಾತ್ಮಕ ದೋಷಗಳನ್ನು ಸರಿಪಡಿಸುವ ಗುರಿ ಹಿನ್ನೆಲೆಯಲ್ಲಿ ಈ ಪರಿಷ್ಕರಣೆ ಮಾಡಲಾಗಿದೆ ಎಂದಿದ್ದಾರೆ.

ಲೋಕಸಭೆಯಲ್ಲಿ ಮಸೂದೆ ಅಂಗೀಕಾರವಾದ ಕೆಲವೇ ಗಂಟೆಗಳ ನಂತರ ಮಧ್ಯರಾತ್ರಿ ಚರ್ಚೆಯ ನಂತರ ರಾಜ್ಯಸಭೆಯಲ್ಲಿ ಧ್ವನಿ ಮತದ ಮೂಲಕ ಮಸೂದೆ ಅಂಗೀಕರವಾಗಿದೆ.ಮಹಾತ್ಮಾ ಗಾಂಧಿಯವರ ಹೆಸರನ್ನು ಮನ್ರೇಗಾದಿಂದ ಕೈಬಿಟ್ಟಿದ್ದನ್ನು ಪ್ರತಿಭಟಿಸಿದ ವಿರೋಧ ಪಕ್ಷಗಳು, ಕೇಂದ್ರದ ಯೋಜನೆಯ ಆರ್ಥಿಕ ಹೊರೆಯನ್ನು ರಾಜ್ಯಗಳ ಮೇಲೆ ವರ್ಗಾಯಿಸುತ್ತಿದೆ ಎಂದು ಆರೋಪಿಸಿವೆ.

ರಾಜ್ಯಸಭೆಯಲ್ಲಿ ಪ್ರತಿಭಟನಾ ನಿರತ ಸದಸ್ಯರು ಮಸೂದೆಯನ್ನು



ಹಿಂಪಡೆಯುವಂತೆ ಒತ್ತಾಯಿಸಿದರು, ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು ಮತ್ತು ಶಾಸನದ ಪ್ರತಿಗಳನ್ನು ಹರಿದು ಹಾಕಿದರು. ಮಸೂದೆ ಅಂಗೀಕಾರದ ಸಮಯದಲ್ಲಿ ಹಲವಾರು ವಿರೋಧ ಪಕ್ಷದ ಸಂಸದರು ಸಭಾತ್ಯಾಗ ಮಾಡಿದರು, ಇದರಿಂದಾಗಿ ಸಭಾಪತಿ ಸಿ.ಪಿ. ರಾಧಾಕೃಷ್ಣನ್ ಅವರು ತಮ್ಮ ತಮ್ಮ ಸ್ಥಾನಗಳಿಗೆ ತೆರಳುವಂತೆ ಸದಸ್ಯರಿಗೆ ಎಚ್ಚರಿಕೆ ನೀಡಿದರೂ ಪ್ರತಿಭಟನೆ ಮುಂದುವರಿದಿತ್ತು.

**ವಿಪಕ್ಷಗಳಿಂದ ದೇಶಾದ್ಯಂತ ಹೋರಾಟ:** ಮಸೂದೆ ಅಂಗೀಕಾರದ ನಂತರ, ವಿರೋಧ ಪಕ್ಷಗಳು ಸಂಸತ್ತಿನ ಸಂಕೀರ್ಣದಲ್ಲಿರುವ ಸಂವಿಧಾನ್ ಸದನದ ಹೊರಗೆ ಧರಣಿ ನಡೆಸಿದವು, ಈ ಶಾಸನ ಗ್ರಾಮೀಣ ಆರ್ಥಿಕತೆಯನ್ನು ದುರ್ಬಲಗೊಳಿಸಿದೆ ಎಂದು ಆರೋಪಿಸಿ ಮತ್ತು ರಾಷ್ಟ್ರವ್ಯಾಪಿ ಆಂದೋಲನ ನಡೆಸುವುದಾಗಿ ಎಚ್ಚರಿಸಿವೆ

.ತೃಣಮೂಲ ಕಾಂಗ್ರೆಸ್ ಸಂಸದರು ಸಂವಿಧಾನ್ ಸದನದ ಮೆಟ್ಟಿಲುಗಳ ಮೇಲೆ 12 ಗಂಟೆಗಳ ಕಾಲ ಪ್ರತಿಭಟನೆ ನಡೆಸಲು ನಿರ್ಧರಿಸಿದ್ದಾರೆ. ಜೊತೆಗೆ ವಿರೋದ ಪಕ್ಷಗಳು ಒಟ್ಟಾಗಿ ಕೇಂದ್ರ ಸರ್ಕಾರದ ವಿರುದ್ಧ ಹೋರಾಟ ನಡೆಸಲು ಮುಂದಾಗಿವೆ.

## ತುರವಿಹಾಳದಲ್ಲಿ ಉಪ ಚುನಾವಣೆ; ಶಸ್ತ್ರಗಳನ್ನು ಠಾಣೆಯಲ್ಲಿಡಲು ಆದೇಶ



**ರಾಯಚೂರು,ಡಿ.19–** ನಗರ ಸ್ಥಳೀಯ ಸಂಸ್ಥೆ ಸಾರ್ವತ್ರಿಕ ಹಾಗೂ ಉಪ ಚುನಾವಣೆ–2025ರ ಚುನಾವಣಾ ವೇಳಾಪಟ್ಟಿ ಘೋಷಣೆಯಾಗಿರುವ ಹಿನ್ನಲೆಯಲ್ಲಿ ಈ ಚುನಾವಣೆಯು ಶಾಂತಿಯುತವಾಗಿ ನಡೆಸಲು ಮುಂಜಾಗ್ರತೆ ಕ್ರಮವಾಗಿ (ರಾಷ್ಟ್ರೀಕೃತ ಬ್ಯಾಂಕುಗಳು ಹಾಗೂ ರಿಜರ್ವ ಬ್ಯಾಂಕ್ ಅವರಿಂದ ಅನುಮೋದಿಸಿದ ಶೆಡ್ಯೂಲ್ಡ್ ಬ್ಯಾಂಕುಗಳ ಸೆಕ್ಯೂರಟಿ ಗಾರ್ಡಗಳ, ಆಯುಧಗಳನ್ನು ಹೊರತುಪಡಿಸಿ) ಚುನಾವಣಾ ಪ್ರಕ್ರಿಯೆ ಮುಗಿಯುವರೆಗೆ ಸಿಂಧನೂರು ತಾಲೂಕಿನ ತುರ್ವಿಹಾಳ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಆಯುಧಗಳನ್ನು ಪರವಾನಿಗೆದಾರರು ಸಾರ್ವಜನಿಕ ಸ್ಥಳಗಳಲ್ಲಿ ಹೊತ್ತು ಪ್ರದರ್ಶನ ಮಾಡುವುದನ್ನು ನಿಷೇಧಿಸಿ ಹಾಗೂ ಆಯುಧಗಳನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗೆ ಠೇವಣಿ ಮಾಡುವಂತೆ ಜಿಲ್ಲಾ ದಂಡಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಆದೇಶ ಹೊರಡಿಸಿದ್ದಾರೆ.

## ರಾಯಚೂರು ಸಿಟಿಯ ಹೋಟೆಲ್, ರೆಸ್ಟೋರೆಂಟ್‌ಗಳ ಮೇಲೆ ಮುಂದುವರೆದ ದಾಳಿ: ಆಹಾರದ ಗುಣಮಟ್ಟ, ಶುಚಿತ್ವ ಪರಿಶೀಲನೆ



ಧೈರ್ಯದ ದಾರಿ

**ರಾಯಚೂರು,ಡಿ.19–** ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಹಾಗೂ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸಾರ್ವಜನಿಕ ಹಿತದೃಷ್ಟಿಯಿಂದಾಗಿ ನೀಡಿದ ನಿರ್ದೇಶನದ ಮೇರೆಗೆ ರಾಯಚೂರು ವಿಭಾಗದ ಸಹಾಯಕ ಆಯಕ್ತ ರಾದ ಗಜಾನನ ಬಾಳೆ ಹಾಗೂ ಇನ್ನೀತರ ಅಧಿಕಾರಿಗಳ ನೇತೃತ್ವದಲ್ಲಿ ಡಿ.18ರಂದು ಸಂಜೆ ಹೊತ್ತಿಗೆ ರಾಯಚೂರು ಸಿಟಿಯಲ್ಲಿನ ಕೆಲ ಹೊಟೆಲಗಳು ಮತ್ತು ರೆಸ್ಟೊರೆಂಟಗಳ ಮೇಲೆ ದಾಳಿ ನಡೆಸಿ ಪರಿಶೀಲಿಸಿದರು.


ರಾಯಚೂರು ಮಹಾನಗರ ಪಾಲಿಕೆಯ ಸಮಿತಿ ಕಾರ್ಯದರ್ಶಿ ಶ್ರೀಕೃಷ್ಣ ಶಾವಂ ತಗೇರಿ, ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮ್ಮದ್, ರಾಯಚೂರು ತಾಲೂಕು ತಹಶೀಲ್ದಾರ್ ಸುರೇಶ ವರ್ಮ, ಮಹಾನಗರ ಪಾಲಿಕೆಯ ಆರೋಗ್ಯಾ ಧಿಕಾರಿ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದಿನ್, ಪಾಲಿಕೆ ಸಂಘಟನಾ ಧಿಕಾರಿ ಕೃಷ್ಣ ಕಟ್ಟಿಮನಿ ಮತ್ತು ಪಾಲಿಕೆ ನಿರೀಕ್ಷಣಾಧಿಕಾರಿಗಳು ಮತ್ತು ಇನ್ನೀ ತರರನ್ನು ಒಳಗೊಂಡ ಅಧಿಕಾರಿಗಳು ಮತ್ತು ಸಿಬ್ಬಂದಿಯ ತಂಡವು ಸ್ಟೇಷನ್ ರಸ್ತೆ ಸೇರಿದಂತೆ ನಗರದ ವಿವಿಧ ಹೋಟೆಲ್ ಹಾಗೂ ರೆಸ್ಟೋರಂಟ್‌ಗಳ ಮೇಲೆ ದಾಳಿ ನಡೆಸಿ, ಅಲ್ಲಿ ತಯಾರಿಸಿದ್ಧ ಬೇರೆ ಬೇರೆ ನಮೂನೆಯ ಉಪಹಾರ ಮತ್ತು ಊಟದ ಆಹಾರದ ಗುಣಮಟ್ಟ, ಅಲ್ಲಿನ ಶುಚಿತ್ವ, ಅಡುಗೆ ತಯಾರಕರ ಆರೋಗ್ಯ, ಲೈಸೆನ್ಸ್ ಮತ್ತು ಇನ್ನೀತರ ವಿಷಯಗಳ ಬಗ್ಗೆ ಸಮಗ್ರ ಪರಿಶೀಲಿಸಿ, ದುರವಸ್ಥೆ ಕಂಡು ಬಂದ ಕಡೆಗಳಲ್ಲಿನ ಹೊಟೆಲ್ ಹಾಗೂ ರೆಸ್ಟೊರೆಂಟಗಳ ಮೇಲೆ ದಂಡ ವಿದಿಸಿ, ಸರಿಪಡಿಸಿಕೊಳ್ಳಲು ಎಚ್ಚರಿಕೆ ನೀಡಿದರು.

ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿನ ಪ್ರಮುಖ ಹೋಟೆಲ್‌ಗಳ ಮೇಲೆ ದಾಳಿ ನಡೆಸಿ ಅಲ್ಲಿನ ಅಡುಗೆ ಕೋಣೆಗಳಿಗೆ ಪ್ರವೇಶಿಸಿ ಆಹಾರ ಸಿದ್ಧತೆಯ ಪರಿ, ಕುಡಿವ ನೀರು ಸಂಗ್ರಹಕ್ಕೆ ಬಳಸಿದ ತೊಟ್ಟಿ ಮತ್ತು ಅಡುಗೆಗೆ ಬಳಸುವ ಪದಾರ್ಥಗಳನ್ನು ಪರಿಶೀಲಿಸಿದರು.

ಅಡುಗೆಗೆ ಸಂಗ್ರಹಿಸಿದ ದವಸ–ಧಾನ್ಯಗಳ ಗುಣಮಟ್ಟ, ತರಕಾರಿಗಳು, ಖರೀದಿಸಿದ್ದ ಕೆಲ ಪದಾರ್ಥಗಳ ಕಾಲಾವಧಿ ವಿವರ, ಅಡುಗೆ ಎಣ್ಣೆ, ಉಪ್ಪಿನ ಗುಣಮಟ್ಟದ ಪ್ರಮಾಣವನ್ನು ಪರಿಶೀಲಿಸಿದರು. ಕೆಲ ಹೋಟೆಲ್‌ಗಳಲ್ಲಿ ಹಾಕಿದ್ದ ಉಪಹಾರ ಮತ್ತು ಊಟದ ದರಪಟ್ಟಿಯ ಬಗ್ಗೆ ಸಹ ಪರಿಶೀಲನೆ ಮಾಡಿದರು.

ಈ ವೇಳೆ ರಾಯಚೂರು ವಿಭಾಗದ ಸಹಾಯಕ ಆಯುಕ್ತರು ಮಾತನಾಡಿ, ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಕಾಯ್ದೆ 2006ರ ಹಾಗೂ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ನಿಯಮಗಳು 2011ರ ಸೂಚನೆಗಳನ್ನು ಕಡ್ಡಾಯ ಅನುಸರಿಸಬೇಕು. ಈ ಸುಧಾರಣಾ ಸೂಚನೆಗಳನ್ನು ಅನುಸರಿಸಲು ವಿಫಲವಾದರೆ ಹೊಟೆಲ್ ರೆಸ್ಟೊರೆಂಟಗಳ ಪರವಾನಿಗೆಯನ್ನು ಅಮಾನತುಗೊಳಿಸಿ ಕಾನೂನು ಕ್ರಮಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

## ಬೈಲ್ ಮರ್ಚೆಡ್ ಗ್ರಾಮದಲ್ಲಿ ಅಗ್ನಿ ಅವಘಡ ರೈತರಿಗೆ ಲಕ್ಷಾಂತರ ರೂಪಾಯಿ ನಷ್ಟ



ಧೈರ್ಯದ ದಾರಿ

**ಮಾನ್ವಿ,ಡಿ.19–** ತಾಲೂಕಿನ ಬೈಲಮರ್ಚೆಡ್ ಗ್ರಾಮದಲ್ಲಿ ಶುಕ್ರವಾರ ಬೆಳಿಗ್ಗೆ 11 ಗಂಟೆಯ ಸುಮಾರಿಗೆ ಭೀಕರ ಅಗ್ನಿ ಅವ ಘಡ ಸಂಭವಿಸಿದ್ದು, ರೈತರು ಸಂಗ್ರಹಿಸಿಟ್ಟಿದ್ದ ಲಕ್ಷಾಂತರ ರೂಪಾಯಿ ಮೌಲ್ಯದ ಕೃಷಿ ಉತ್ಪನ್ನಗಳು ಬೆಂಕಿಗೆ ಆಹು ತಿಯಾಗಿವೆ. ಗ್ರಾಮದ ರೈತರಾದ ಬಸವರಾಜ, ಚಂದ್ರ, ಅನು ಸೂಯಮ್ಮ, ಆಂಜನೇಯ, ಈಶಪ್ಪ ಹಾಗೂ ಮೌನೇಶ ಎಂಬುವವರು ತಮ್ಮ ಜಾನುವಾರುಗಳಿಗಾಗಿ ಬಯಲು ಪ್ರದೇಶದಲ್ಲಿ ಸಂಗ್ರಹಿಸಿಟ್ಟಿದ್ದ ಎರಡು ಭತ್ತದ ಮೇವಿನ ಬಣವೆಗಳು, ಒಂದು ಜೋಳದ ಸಪ್ಪೆಯ ಬಣವೆ ಹಾಗೂ ಸುಮಾರು 20 ಎಕರೆಯಲ್ಲಿ ಬೆಳೆದು ಸಂಗ್ರಹಿಸಿಟ್ಟಿದ್ದ ಹತ್ತಿ ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿದೆ. ಈ ಆಕಸ್ಮಿಕ ಬೆಂಕಿ ಅವಘಡದಿಂದಾಗಿ ರೈತರಿಗೆ ಅಂದಾಜು 4 ಲಕ್ಷ ರೂಪಾಯಿಗಳಷ್ಟು ಆರ್ಥಿಕ ನಷ್ಟ ಉಂಟಾಗಿದೆ ಎಂದು ಮಾನ್ವಿ ಅಗ್ನಿಶಾಮಕ ಠಾಣಾಧಿಕಾರಿ ರಂಗಪ್ಪ ತಿಳಿಸಿದ್ದಾರೆ.

ಘಟನೆಯ ಬಗ್ಗೆ ಮಾಹಿತಿ ಲಭಿಸುತ್ತಿದ್ದಂತೆಯೇ ಮಾನ್ವಿ ಅಗ್ನಿಶಾಮಕ ಇಲಾಖೆಯ ಸಹಾಯಕ ಠಾಣಾಧಿಕಾರಿ ಹಾಜಿಮೀಯ ಹಾಗೂ ಸಿಬ್ಬಂದಿಗಳು ತಕ್ಷಣ ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸುವ ಕಾರ್ಯಾಚರಣೆ ನಡೆಸಿದರು. ಅಗ್ನಿಶಾಮಕ ಸಿಬ್ಬಂದಿಗಳು ಹರಸಾಹಸ ಪಟ್ಟು ಬೆಂಕಿಯನ್ನು ಹತೋಟಿಗೆ ತರುವ ಮೂಲಕ ಪಕ್ಕದಲ್ಲೇ ಇದ್ದ ಜನವಸತಿ ಪ್ರದೇಶಗಳಿಗೆ ಬೆಂಕಿ ವ್ಯಾಪಿಸದಂತೆ ತಡೆದು, ಸಂಭವಿಸಬಹುದಾಗಿದ್ದ ದೊಡ್ಡ ಮಟ್ಟದ ಅನಾಹುತವನ್ನು ತಪ್ಪಿಸಿದ್ದಾರೆ. ಇದೇ ವೇಳೆ ಗ್ರಾಮಸ್ಥರು ಕೂಡ ಶ್ರಮವಹಿಸಿ ಬಣವೆಗಳ ಹತ್ತಿರ ಕಟ್ಟಲಾಗಿದ್ದ ಎಮ್ಮೆಗಳನ್ನು ಸುರಕ್ಷಿತವಾಗಿ ರಕ್ಷಿಸುವಲ್ಲಿ ಸಹಕರಿಸಿದರು.

## ರಾಷ್ಟ್ರೀಯ ಸೇವಾಯೋಜನೆ ಘಟಕದಿಂದ ಆರೋಗ್ಯ ಜಾಗೃತಿ ಜಾಥ




ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರೌಢ ಶಾಲಾ ವಿಭಾಗದ ರಾಷ್ಟ್ರೀಯ ಸೇವಾಯೋಜನೆ ಘಟಕ ಹಾಗೂ ನಂದಿ ಫೌಂಡೇಶನ್ ವತಿಯಿಂದ ನಡೆದ ಉಚಿತ ಆರೋಗ್ಯ ಮೇಳದ ಜಾಗೃತಿ ಜಾಥಾ ಅಂಗವಾಗಿ ಕಾಲೇಜಿನ ವಿದ್ಯಾರ್ಥಿಗಳು ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಭೇಟಿ ನೀಡಿ ಮಹಿಳೆಯರಿಗೆ ಆಸ್ಪತ್ರೆಯಲ್ಲಿ ದೊರೆಯುವ ಆರೋಗ್ಯ ಸೌಲಭ್ಯಗಳ ಬಗ್ಗೆ ಹಾಗೂ ಬಾಲಕಿಯರ ಆರೋಗ್ಯ ಕುರಿತು ತಜ್ಞ ವೈದ್ಯರಿಂದ ಮಾಹಿತಿ ಪಡೆದರು.

ಪಟ್ಟಣದ ಪ್ರಮುಖ ಬೀದಿಗಳಲ್ಲಿ ನೂರಾರು ವಿದ್ಯಾರ್ಥಿನಿಯರಿಂದ ಆರೋಗ್ಯ ಜಾಗೃತಿ ಜಾಥ ನಡೆಯಿತು.

ರಾಷ್ಟ್ರೀಯ ಸೇವಾಯೋಜನೆ ಘಟಕದ ಕಾರ್ಯಕ್ರಮಾಧಿಕಾರಿ ಜಯಭೀಮ ಬಾವಿಕಟ್ಟಿ ಹಾಗೂ ಉಪನ್ಯಾಸಕರಾದ ಮಧುಶ್ರೀ ,ನಿರ್ಮಾಲ ಹಾಗೂ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ವೈದ್ಯರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.

## ಡಿ. 22 ಕ್ಕೆ ಲೋಕಸಭಾ ಸದಸ್ಯರ ಮನೆ ಮುಂದೆ ಪ್ರತಿಭಟನೆ

**ಬಳ್ಳಾರಿ:ಡಿ,19–** ಈ ಹಿಂದೆ ಇದ್ದ ಸ್ವರೂಪದಲ್ಲಿಯೇ ಮನರೇಗ ಯೋಜನೆ ಮುಂದುವರೆಸಲು ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಲು, ಹಾಗೂ ಕೇಂದ್ರ ಸರ್ಕಾರ ಬದಲಿಸಲು ಹೊರಟಿರುವ ಮನರೇಗಾ ಯೋಜನೆಯ ಸ್ವರೂಪವನ್ನು ವಿರೋಧಿಸಿ ಈ ತಿಂಗಳ 22 ರಂದು ಲೋಕಸಭಾ ಸದಸ್ಯರ ಮನೆ ಮುಂದೆ ಪ್ರತಿಭಟನೆ ನಡೆಸಲಿದೆಂದು ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆ ಹೇಳಿದೆ

ಸಂಘಟನೆಯ ಜಿಲ್ಲಾ ಸಂಚಾಲಕಿ ಎಸ್. ಅಕ್ಕಮಹಾದೇವಿ ಮರಬ್ಬೀಹಾಳ್ ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ

# ಪ್ರತಿಯೊಂದು ಮಗು ಶಿಕ್ಷಣದಿಂದ ವಂಚಿತರಾಗಬಾರದು: ತಿರುಮಲರೆಡ್ಡಿ




ಧೈರ್ಯದ ದಾರಿ

**ದೇವದುರ್ಗ,ಡಿ.19–** ತಾಲ್ಲೂಕಿನ ಗಬ್ಬೂ ರು ಗ್ರಾಮು ಉನ್ನತಿಕರಿಸಿದ ಬಾಲಕರ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ವಿಶೇಷ ಗ್ರಾಮ ಸಭೆ ಗ್ರಾಮ ಪಂಚಾಯತ್ ಗಬ್ಬೂರು ಮತ್ತು ಡಾನ್ ಬಾಸ್ಕೋ ಸಮಾಜ ಸೇವಾ ಸಂಸ್ಥೆ ದೇವ ದುರ್ಗ ಹಾಗೂ ಕ್ರೈ ಸಂಸ್ಥೆ ಬೆಂಗಳೂ ರು, ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿ ಕೊಂಡಿದ್ದ ಮಕ್ಕಳ ಗ್ರಾಮ ಸಭೆ ಕಾರ್ಯ ಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳು ಶಿಸ್ತು ಕಾಪಾಡಿಕೊಳ್ಳಬೇಕು, ಪಾಲಕರು ತಮ್ಮ ಮಕ್ಕಳಿಗೆ ಉತ್ತಮ ಪರಿಸರ ಒದಗಿಸಿಕೊಡಬೇಕು, ಪ್ರಾಥಮಿಕ ಹಂತದ ಮಕ್ಕಳು ಯಾರು ಕೂಡ ಶಿಕ್ಷಣ ದಿಂದ ವಂಚಿತರಾಗಬಾರದು, ಮಕ್ಕಳ ಹಕ್ಕುಗಳಿಗೆ ರಕ್ಷಣೆಗಾಗಿ ನಮ್ಮ ಗ್ರಾಮ ಪಂಚಾಯಿತಿ ಮತ್ತು ಸರಕಾರ ಮಕ್ಕಳಿಗಾಗಿ ಸಾಕಷ್ಟು ಶ್ರಮಿಸುತ್ತಿದೆ, ಅಲ್ಲದೆ ಸರಕಾರ ಮತ್ತು ಸಮುದಾಯ ಎಲ್ಲವು ಮಕ್ಕಳ ರಕ್ಷಣೆಯ ಬಗ್ಗೆ ಕಾಳಜಿ ವಹಿಸುತ್ತಿದೆ, ಅಲ್ಲದೆ ಅಭಿವೃದ್ಧಿ ಅಧಿಕಾರಿಗಳು ಶಾಲಾ ಮಕ್ಕಳ ಜೊತೆ ಶಾಲೆಯಲ್ಲಿ ಇರುವ ಮೂಲಭೂತ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಿದರು. ಈ ಚರ್ಚೆಯಲ್ಲಿ ಎಲ್ಲಾ ಊರಿನ ಶಾಲೆಯ ಮಕ್ಕಳು ಭಾಗವಹಿದರು, ತಮ್ಮ ತಮ್ಮ ಶಾಲೆಯ, ವಸತಿ ನಿಲಯಗಳ ಹಾಗೂ ಬಸ್ ಸೌಲಭ್ಯಗಳ ಕುರಿತು ಮಕ್ಕಳು ಸಮ ಸ್ಯೆಗಳನ್ನು ಅಭಿವೃದ್ಧಿ ಅಧಿಕಾರಿಗಳಿಗೆ ನೇರವಾಗಿ ಸಭೆಯ ಮುಖಾಂತರ ತಿಳಿಸಿ ದ್ದರು. ನಂತರ ಅಭಿವೃದ್ಧಿ ಅಧಿಕಾರಿ ತಿರುಮಲರೆಡ್ಡಿ ಅವರು ಮಕ್ಕಳ ಸಮಸ್ಯೆ ಯನ್ನು ಕೆಲವೊಂದು ಸ್ಥಳದಲ್ಲಿಯೇ ಬಗೆಹ ರಿಸಿದ್ದರು, ಇನ್ನೂ ಕೆಲವೊಂದು ಸಂಬಂಧ ಪಟ್ಟವರಿಗೆ ಪತ್ರ ಬರೆದು ಸಮಸ್ಯೆ ಬಗೆಹ ರಿಸಲು ಪ್ರಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಮಕ್ಕಳಿಗೆ ಉತ್ತರಿಸಿ ದರು.

ನಂತರ ಕ್ರೈ ಸಂಸ್ಥೆ ಯೋಜನಾ ಧಿಕಾರಿ ಗಳಾದ ಕೆ.ಪಿ ಅನಿಲ್ ಕುಮಾರ ಅವರು ಮಾತನಾಡಿ, ಮಕ್ಕಳ ಸುರಕ್ಷತೆ ಮತ್ತು ಮಕ್ಕಳ ಭವಿಷ್ಯ ಗಟ್ಟಿ ಮಾಡಲು ಗ್ರಾಮ ಮಟ್ಟದಲ್ಲಿ ಜಾಗೃತಿ ಅನಿವಾರ್ಯ ಈ ಹಿನ್ನೆಲೆಯಲ್ಲಿ ಇಂದು ಮಕ್ಕಳ ಗ್ರಾಮ ಸಭೆ ಆಯೋಜನೆ ಮಾಡಿದ್ದು ಮಕ್ಕಳ ಸಮಸ್ಯೆ ಧೈರ್ಯದಿಂದ ಅಧಿಕಾರಿಗಳಿಗೆ ಹೇಳಿ ತಮ್ಮ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕೆಂದು ತಿಳಿಸಿದರು. ಮಕ್ಕಳು ಈ ದೇಶದ ಅಮೂಲ್ಯ ಸಂಪತ್ತು ಅವರಿಗೆ ಸಿಗಬೇಕಾದ ಹಕ್ಕು ಮತ್ತು ಅವರಿಗೆ ಇರುವಂತಹ ಸೌಲಭ್ಯಗಳನ್ನು ತಿಳಿಸಿದ್ದರು, ಸಮಾಜ ಮತ್ತು ಸರಕಾರ ಗ್ರಾಮಗಳ ಅಭಿವೃದ್ಧಿಗೆ ಶ್ರಮಿಸುತ್ತಿವೆ ಎಂದರು.

ಗಬ್ಬೂರಿನ ಎಲ್ಲಾ ಸರ್ಕಾರ ಶಾಲೆಯ ಮಕ್ಕಳು ಗ್ರಾಮ ಪಂಚಾಯತಿ ವತಿಯಿಂದ ವಿವಿಧ ಸ್ಪರ್ಧೆಯನ್ನು ಏರ್ಪಡಿಸಿ ವಿಜೇತರಾದವರಿಗೆ ಕಫ್, ಮಾಡೆಲ್ ಬಹುಮಾನ ವಿತರಿಸಲಾಯಿತು.

ಕಾರ್ಮಿಕ ಇಲಾಖೆಯ ಶ್ರೀಧರ್ ಅವರು ಮಾತನಾಡಿ ಬಾಲಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 (ತಿದ್ದುಪಡಿ 2016) ರಂತೆ 14 ವರ್ಷದೊಳಗಿನ ಮಕ್ಕಳನ್ನು ಯಾವುದೇ ಕ್ಷೇತ್ರದಲ್ಲಿ ಹಾಗೂ 15 ರಿಂದ 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿದಲ್ಲಿ 2 ವರ್ಷ ಜೈಲು, 50,000 ದಂಡ. ವಿಧಿಸಲಾಗುವುದು ಎಂದರು.

ಬಾಲಕರ ಶಾಲೆಯ ಮುಖ್ಯಗುರುಗಳಾದ ಷಣ್ಮುಖ ಹೂಗಾರ ಮಾತನಾಡಿ ಮಕ್ಕಳ ಹಕ್ಕುಗಳ ಬಗ್ಗೆ ಮಕ್ಕಳ ರಕ್ಷಣೆಯ ಕುರಿತು ಮಾಹಿತಿ ತಿಳಿಸಿದ್ದರು, ಸಮಾಜ ಮತ್ತು ಸರಕಾರದ ಕರ್ತವ್ಯಗಳ ಬಗ್ಗೆ ವಿವರಿಸಿದರು,

ಮಕ್ಕಳಿಗೆ ಸ್ವಚ್ಛತೆಯ ಬಗ್ಗೆ ಮತ್ತು ಪರಿಸರದ ಕಾಳಜಿಯ ಬಗ್ಗೆ ತಿಳಿಸಿದ್ದರು. ಮಕ್ಕಳ ಶೈಕ್ಷಣಿಕ ಪ್ರಗತಿ, ಮಕ್ಕಳ ಹಕ್ಕು ಕಾಯ್ದೆಗಳ ಬಗ್ಗೆ ತಿಳಿಸಿದರು,

ವೇದಿಕೆ ಮೇಲೆ ವಿದ್ಯಾರ್ಥಿ ಪ್ರತಿನಿಧಿ ಶರಣಬಸಪ 8ನೇ ತರಗತಿ, ಮತ್ತು ಗಬ್ಬೂರು ಕಾರ್ಕ್ ವಿದ್ಯಾರ್ಥಿ ಪ್ರತಿನಿಧಿ ಕುಮಾರಿ. ಶಕುಂತಲಾ 9ನೇ ತರಗತಿ ಮಾತನಾಡಿ ಶಾಲೆಯು ಸರ್ವತೋಮುಖ ಅಭಿವೃದ್ಧಿಯ ಬಗ್ಗೆ ಹಾಗೂ ಎಲ್ಲಾ ಸಮಸ್ಯೆಗಳ ಬಗ್ಗೆ ಧ್ವನಿ ಎತ್ತಿ ಕೆಲವೊಂದು ಸಮಸ್ಯೆ ಪರಿಹಾರಿಸಿಕೊಂಡಳು, ನಾನು ಇಷ್ಟು ಧೈರ್ಯವಾಗಿ ಮಾತನಾಡಲು ಕಾರಣ ಕ್ರೈ ಸಂಸ್ಥೆಯ ಕಾರ್ಕ್ ಸೆಂಟರ್ ನಿಂದ ನಾನು ಈ ವೇದಿಕೆ ಮೂಲಕ ಕ್ರೈ ಸಂಸ್ಥೆಗೆ ಧನ್ಯವಾದಗಳು ತಿಳಿಸುತ್ತೇನೆ.

ವೇದಿಕೆ ಮೇಲೆ ಮುಖ್ಯ ಅತಿಥಿಯಾಗಿ ಗ್ರಾ.ಪಂ ಅಧ್ಯಕ್ಷರಾದ ಪಾರ್ವತಿ ಗಂಡ ಬುಸ್ಸಪ್ಪ, ಬಾಲಕರ ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಬಸನಗೌಡ ರಾಮನೋರ್, ಪ್ರೌಢಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಶಾಂತಪ್ಪ, ಆರ್.ಡಿ.ಪಿ.ಆರ್ ಅಧಿಕಾರಿಗಳಾದ ಪಂಪಾಪತಿ, ಪ್ರೌಢ ಶಾಲೆಯು ಮುಖ್ಯಗುರುಗಳಾದ ಹೊನ್ನಕೇರಪ್ಪ, ಪೊಲೀಸ್ ಇಲಾಖೆಯ ಅಧಿಕಾರಿಗಳಾದ ಬಂದಯ್ಯ ಸ್ವಾಮಿ, ಕ್ರೈ ಸಂಸ್ಥೆಯ ಸಂಯೋಜಕರಾದ ಮಲ್ಲಯ್ಯ ಖಾನಾಪೂರ, ಸಮಾಜಿಕ ಹೋರಾಟಗಾರರಾದ ರಾಜಪ್ಪ ಸಿರವಾರಕರ್, ಶ್ರೀಮಂತ, ಬಸವಲಿಂಗಪ್ಪ ಕರೆಗಾರ ಶಿಕ್ಷಕರು ಕಾರ್ಯಕ್ರಮದ ನಿರೂಪಣೆಯನ್ನು ಮಾಡಿದರು.

ಈ ಸಂದರ್ಭದಲ್ಲಿ ವಿವಿಧ ಶಾಲೆಯ ಶಿಕ್ಷಕರು, ವಿವಿಧ ಶಾಲೆಯ ಮಕ್ಕಳು ಸೇರಿದಂತೆ ಅನೇಕರು ಇದ್ದರು.

# ಸಚಿವ ಮಹದೇವಪ್ಪ ರಾಜೀನಾಮೆಗೆ ಆಗ್ರಹ ಛಲವಾದಿ ನಾರಾಯಣಸ್ವಾಮಿ

**ಬೆಳಗಾವಿ,ಡಿ.19–** ದಲಿತರ ಉದ್ಧಾರ ಮಾಡದೇ ವಂಚನೆಗೆ ಕಾರಣರಾದ ಸಚಿವ ಮಹದೇವಪ್ಪ ಅವರು ತಕ್ಷಣ ರಾಜೀನಾಮೆ ಕೊಡಬೇಕೆಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಒತ್ತಾಯಿಸಿದ್ದಾರೆ.

ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿವ ಮಹದೇವಪ್ಪ ಅವರು ದಲಿತ ವಿರೋಧಿ ಎಂದು ಆಕ್ಷೇಪಿಸಿದರು. ಕೇವಲ ತಮ್ಮ ಬಾಸ್‌ಗಳನ್ನು ಓಲೈಕೆ ಮಾಡಿಕೊಂಡು ಲೂಟಿ ಮಾಡಿ, ಇವರ ಕುಟುಂಬಗಳನ್ನು ಉದ್ಧಾರ ಮಾಡುತ್ತಿದ್ದಾರೆ. ಸಮುದಾಯಗಳ ಉದ್ಧಾರ ಇವರಿಂದ ಆಗುತ್ತಿಲ್ಲ ಎಂದು ಟೀಕಿಸಿದರು.

ಡಾ.ಬಾಬಾ ಸಾಹೇಬ ಅಂಬೇಡ್ಕರ್ ಅವರಿಗೆ ಅಪಮಾನ ಮಾಡುವ ರೀತಿಯಲ್ಲಿ ನೀವು ಇವತ್ತು ಅಧಿಕಾರ ನಡೆಸುತ್ತಿದ್ದೀರಿ ಎಂದು ಆರೋಪಿಸಿದರು.ಡಾ. ಅಂಬೇಡ್ಕರ್ ಅವರು ಬದುಕಿದ್ದರೆ ಇಂಥವರನ್ನು ಎಲ್ಲಿಡಬೇಕೋ ಅಲ್ಲಿ ಇಡುತ್ತಿದ್ದರು ಎಂದು ತಿಳಿಸಿದರು. ಇವರು ದಲಿತರ ಸರ್ವನಾಶ ಮಾಡುವ ಕೆಲಸ ಮಾಡುತ್ತಿದ್ದಾರೆ ಎಂದು ದೂರಿದರು.

ಎಸ್‌ಇಪಿ, ಟಿಎಸ್‌ಪಿ ಹಣದ ಲೂಟಿ, ಜನರಿಗೆ ವಂಚನೆ ಕಾರ್ಯ ನಡೆಯುತ್ತಿದೆ. ಅವರಿಗೆ ಏನೂ ಸಿಗದಂತೆ ಮಾಡುತ್ತಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಒಳ ಮೀಸಲಾತಿಯಲ್ಲೂ ಸಂಪೂರ್ಣ ತಾರತಮ್ಯ ಒಳ ಮೀಸಲಾತಿಯಲ್ಲೂ ಸಂಪೂರ್ಣ ತಾರತಮ್ಯ ಮಾಡಲಾಗಿದೆ ಎಂದು ಛಲವಾದಿ ನಾರಾಯಣಸ್ವಾಮಿ ಅವರು ಆರೋಪಿಸಿದರು.

ಯಾರಿಗೂ ನೆಮದಿ ಇಲ್ಲದಂತೆ ಮಾಡಿದ್ದಾರೆ. ಈ ಕುರಿತ ಮಸೂದೆ ಬರಲಿದೆ ಎಂದು ತಿಳಿಸಿದರು. ಎಸ್‌ಇಪಿ, ಟಿಎಸ್‌ಪಿ ಹಣವನ್ನು ಅನ್ಯಕಾರ್ಯಗಳಿಗೆ ಬಳಸಿ ಪರಿಶಿಷ್ಟ ಜಾತಿ, ವರ್ಗ– ದಲಿತ ಸಮುದಾಯಗಳಿಗೆ ಅನ್ಯಾಯ ಮಾಡಲಾಗುತ್ತಿದೆ. ಸರ್ಕಾರದ ಈ ಕ್ರಮ ಖಂಡನೀಯ ಎಂದು ತಿಳಿಸಿದರು.

ಸಚಿವ ಮಹದೇವಪ್ಪ ಅವರು ಭ್ರಷ್ಟಾಚಾರದಲ್ಲಿ ನಿರತರಾಗಿದ್ದಾರೆ ಎಂದು ಆರೋಪಿಸಿದರು. ಈ ವರ್ಷದಲ್ಲಿ ಪರಿಶಿಷ್ಟ ಜಾತಿಗಳ ಶ್ರೇಯೋಭಿವೃದ್ಧಿಗೆ 42 ಸಾವಿರ ಕೋಟಿ ಎಸ್‌ಇಪಿ, ಟಿಎಸ್‌ಪಿ ಮೊತ್ತವನ್ನು ಮೀಸಲಿಟ್ಟಿದ್ದೇವೆ ಎಂದು ಹೇಳುತ್ತಾರೆ. ಇದುವರೆಗೆ ಈ 3 ವರ್ಷಗಳಲ್ಲಿ 39 ಸಾವಿರ ಕೋಟಿ ರೂಪಾಯಿಯನ್ನು ಗ್ಯಾರಂಟಿಗಳಿಗೆ ಬಳಸಿದ್ದಾರೆ. ಎಸ್‌ಇಪಿ, ಟಿಎಸ್‌ಪಿ ಹಣ ದಲಿತರ ಶ್ರೇಯೋಭಿವೃದ್ಧಿಗಾಗಿ ಇದೆ. ಮನೆ ಕಟ್ಟಿ ಕೊಡುವುದು, ಯುವಕರಿಗೆ ಕಾರು ಖರೀದಿಸಿ ಕೊಟ್ಟು ಸ್ವಂತ ಉದ್ಯೋಗಕ್ಕೆ ಪ್ರೋತ್ಸಾಹ, ವ್ಯಾಪಾರಕ್ಕೆ ಸಾಲ ಸಹಾಯ, ಗಂಗಾ ಕಲ್ಯಾಣ ಅನುಷ್ಠಾನ, ಅವರ ಮನೆಗೆ ರಸ್ತೆಯಂಥ ಚಟುವಟಿಕೆ ಮಾಡಬೇಕಿತ್ತು. ಗ್ಯಾರಂಟಿ ಕೊಡುವಾಗ ನನಗೂ ಫ್ರಿ, ನಿನಗೂ ಫ್ರಿ ಎಂದರು ಎಂದು ದೂರಿದರು.

ಆದರೆ, ಇಲ್ಲಿ ಮಾಡಿದ್ದೇನು? ಎಲ್ಲರಿಗೂ ಖಜಾನೆ ಹಣ ಕೊಟ್ಟು, ದಲಿತರಿಗೆ ಅನ್ಯಾಯ, ಮೋಸ ಮಾಡಿ, ಎಸ್‌ಇಪಿ, ಟಿಎಸ್‌ಪಿ ಹಣವನ್ನು ಇದೇ ಗ್ಯಾರಂಟಿ ಹಣ ಎಂದು ಕೊಡಲಾಗಿದೆ ಎಂದು ಟೀಕಿಸಿದರು.

ಸರ್ಕಾರವು ಗ್ಯಾರಂಟಿ ಯೋಜನೆ ತಾರದೇ ಇದ್ದರೆ 42 ಸಾವಿರ ಕೋಟಿಯನ್ನು ಯಾರಿಗೆ ಕೊಡುತ್ತಿದ್ದರು ದಲಿತ ಸಮುದಾಯದ ಅಭಿವೃದ್ಧಿಗೇ ಅದು ಹೋಗುತ್ತಿತ್ತು. ಗ್ಯಾರಂಟಿಗೆ ದಲಿತರಿಗೆ ಖಜಾನೆ ಹಣ ಕೊಡದೇ ಇರುವುದು ಮೋಸವಲ್ಲವೇ ಎಂದು ಕೇಳಿದರು.

ಆದರೆ, ಇದು ದಲಿತ ಸಮುದಾಯಗಳಿಗೆ ಅರ್ಥ ಆಗಿಲ್ಲ ಎಂದು ನುಡಿದರು. ಕೆಲವು ದಲಿತ ಸಂಘಟನೆಗಳ ಮೂಗಿಗೆ ತುಪ್ಪ ಸವರಿದ ಕಾಂಗ್ರೆಸ್ ಅನೇಕ ದಲಿತ ಸಂಘಟನೆಗಳಿವೆ. ದಲಿತರಿಗೆ ಅನ್ಯಾಯ ಆದಾಗ ಅವು ಹೊರಕ್ಕೆ ಬಂದು ಹೋರಾಟ ಮಾಡುತ್ತವೆ. ಈಚೆಗೆ ಕೆಲವು ಸಂಘಟನೆಗಳು ಕಾಂಗ್ರೆಸ್ ಜೊತೆ ಮಾರಾಟ ಆಗಿ ಹೋಗಿವೆ ಎಂದು ಎಂದು ಛಲವಾದಿ ನಾರಾಯಣಸ್ವಾಮಿ ಅವರು ಆರೋಪಿಸಿದರು.

ಎಲ್ಲ ಸಂಘಟನೆಗಳು ಎಂದು ನಾನು ಹೇಳಿಲ್ಲ; ಮಾರಾಟ ಆದ ಕಾರಣದಿಂದ ಅವರು ಏನೇ ಆದರೂ ಕಾಂಗ್ರೆಸ್ ಜೊತೆ ಉಳಿಯುತ್ತಾರೆ. ಹೊರತು ಹೊರಗಡೆ ಬಂದಿಲ್ಲ. ಕಾಂಗ್ರೆಸ್ ಪಕ್ಷವು ಅವರ ಮೂಗಿಗೆ ತುಪ್ಪ ಸವರಿದೆ ಎಂದು ಆರೋಪಿಸಿದರು.ವಿಧಾನಪರಿಷತ್ ಸದಸ್ಯರಾದ ಶ್ ಹೇಮಲತಾ ನಾಯಕ್, ಎಸ್. ಕೇಶವ್ ಪ್ರಸಾದ್ ಅವರು ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿದ್ದರು.

ಮೊದಲನೇ ಪುಟದಿಂದ

# ಡಿ. 22 ಕ್ಕೆ ಲೋಕಸಭಾ ಸದಸ್ಯರ ಮನೆ ಮುಂದೆ ಪ್ರತಿಭಟನೆ


ನಡೆಸಿ. ಕೇಂದ್ರ ಸರ್ಕಾರದ ಪ್ರಸ್ತಾವಿತ ವಿಕಸಿತ ಭಾರತ ರೋಜಗಾರ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) 2025 ಮಸೂದೆಯನ್ನು ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆ ವಿರೋಧಿಸುತ್ತಿದೆ. ಕಾರ್ಮಿಕರು ಮತ್ತು ಯಾವುದೆ ಕಾರ್ಮಿಕ ಗುಂಪುಗಳ ಜೊತೆ ಸಮಾಲೋಚನೆ ನಡೆಸದೆ ಈ ಮಸೂದೆಯನ್ನು ರಚಿಸಿದೆ. ಈ ಮಸೂದೆ ಮನರೇಗವ ನ್ನು ಪೂರ್ಣ ಪ್ರಮಾಣದಲ್ಲಿ ಕಿತ್ತೊಗೆಯುವ ಹುನ್ನಾರವಾಗಿದೆ. ಉದ್ಯೋಗ ಖಾತ್ರಿಯನ್ನು ಕೇಂದ್ರ ಸರಕಾರದ ಬಿಗಿ ಮುಷ್ಟಿಯಿಂದ ಕೇಂದ್ರಿಕೃತ, ವಿವೇಚನಾಯುಕ್ತ. ಬಜೆಟ್ ನ್ನು ನಿಯಂತ್ರಿಸುವ ಯೋಜನೆಯನ್ನಾಗಿ ಬದಲಾಯಿಸಲು ಹೊರಟಿದೆ. ಬಡವರ ಉದ್ಯೋಗದ ಹಕ್ಕನ್ನು ಕಸಿದುಕೊಳ್ಳುವ ಪ್ರಯತ್ನ ಇದಾಗಿದೆ. ಇದು ಬಡವರ ಪರ ಅಲ್ಲ ಕಾಯ್ದೆ ಸ್ವರೂಪ ಇದ್ದ ನರೇಗಾವನ್ನು ಯೋಜನೆಯ ಸ್ವರೂಪ ಮಾಡಿದೆ. ಇದರಲ್ಲಿ ಅವರದ್ದೇ ನಿಯಮಗಳು ಇರಲಿವೆ.

ಕೆಲಸ ಬೇಕಾದಾಗ ಜನತೆಗೆ ಕೆಲಸ ಕೊಡಬೇಕಿತ್ತು ಕೊಡದಿದ್ದರೆ ಕಾಯ್ದೆಯಡಿ ಹೋರಾಟ ಮಾಡಬಹುದಿತ್ತು.ಆ ಹಕ್ಕನ್ನು ಇ8 ನೂತನ ಮಸೂದೆ ಕಸಿದುಕೊಳ್ಳಲಿದೆ. ಈಗಲೇ ನೂರು ದಿನ ಕೆಲಸ ಸರಿಯಾಗಿಕೊಡುತ್ತಿಲ್ಲ. ಇನ್ನು 125 ದಿನದ ಮಾತೆಲ್ಲಿ. ನಮಗೆ ಈ ಹಿಂದಿನಂತೆ ಕಾಯ್ದೆ ಇರಲಿ ಯೋಜನೆ ಬೇಡ.

ಅದಕ್ಕಾಗಿ ಈ ಹಿಂದಿನ ಸ್ವರೂಪದಲ್ಲಿಯೇ ಉದ್ಯೋಗ ಖಾತ್ರಿ ಯೋಜನೆ ಇರಬೇಕೆಂದು ಡಿ 22 ರಂದು ಎಂಪಿ ಮನೆಗಳಮುಂದೆ ಪ್ರತಿಭಟನೆ ಮಾಡಲಿದೆಂದು ತಿಳಿಸಿದರು.

# ವಿಮಾನ ದುರಂತ ಹಲವರ ಸಾವು

**ವಾಷಿಂಗ್ಟನ್, ಡಿ.19–** ಅಮೆರಿಕಾದಲ್ಲಿ ಮತ್ತೊಂದು ವಿಮಾನ ದುರಂತ ಸಂಭವಿಸಿದ್ದು, ಉತ್ತರ ಕೆರೊಲಿನಾದ ಇರೆಡೆಲ್ ಕೌಂಟಿಯಲ್ಲಿ ವಿಮಾನ ಅಪಘಾತಕ್ಕೀಡಾಗಿ ಹಲವಾರು ಜನರು ಸಾವನ್ನಪ್ಪಿದ್ದಾರೆ.



ಈ ವಿಮಾನ ದುರ್ಘಟನೆಯನ್ನು ಮೊದಲು ಸ್ಟೇಟ್ಸ್‌ವಿಲ್ಲೆ ಪ್ರಾದೇಶಿಕ ವಿಮಾನ ನಿಲ್ದಾಣ ವರದಿ ಮಾಡಿದೆ. "ಸುಮಾರು ಬೆಳಿಗ್ಗೆ 10:15 ಕ್ಕೆ, ವಿಮಾನವು ಇಳಿಯುವಾಗ ಅಪಘಾತಕ್ಕೀಡಾಗಿದೆ. ಫೆಡರಲ್ ವಿಮಾನಯಾನ ಆಡಳಿತ ಮಂಡಳಿ ಘಟನೆಯ ಬಗ್ಗೆ ತನಿಖೆ ನಡೆಸುತ್ತದೆ ಎಂದು ಹೇಳಿದೆ.

ವರದಿಗಳ ಪ್ರಕಾರ, ವಿಮಾನದಲ್ಲಿದ್ದ ಎಲ್ಲಾ 7 ಜನರನ್ನು ಗುರುತಿಸಲಾಗಿದೆ. ಇದರಲ್ಲಿ ಮಾಜಿ ನಾಸ್ಕರ್ ಚಾಲಕ ಗ್ರೆಗ್ ಬಿಫಲ್ (55), ಅವರ ಪತ್ನಿ ಕ್ರಿಸ್ಟಿನಾ ಗ್ರಾಸು ಬಿಫಲ್, ಅವರ ಮಗ ರೈಡರ್ ಮತ್ತು ಬಿಫಲ್ ಅವರ ಮಗಳು ಎಮ್ಮಾ ಸೇರಿದ್ದಾರೆ. ಇತರ ಮೂವರನ್ನು ಕ್ರೇಗ್ ವಾಡ್ಸ್ ವರ್ತ್, ಡೆನ್ನಿಸ್ ಡಟ್ಟನ್ ಮತ್ತು ಡಟ್ಟನ್ ಅವರ ಮಗ ಜ್ಯಾಕ್ ಎಂದು ಗುರುತಿಸಲಾಗಿದೆ.

ಎಲ್ಲರೂ ನಾಸ್ಕರ್ ಸಮುದಾಯದಲ್ಲಿ ಪ್ರಸಿದ್ಧರಾಗಿದ್ದಾರೆ ಎಂದು ಜಂಟಿ ಹೇಳಿಕೆಯಲ್ಲಿ, ಕುಟುಂಬಗಳು ಮೂಲಗಳು ತಿಳಿಸಿವೆ.

ವಿಮಾನವು ವಿಮಾನ ನಿಲ್ದಾಣದಿಂದ ಹೊರಟು ತಕ್ಷಣವೇ ಬೆಂಕಿ ಹೊತ್ತಿಕೊಳ್ಳುವ ಮೊದಲು ಇಳಿಯಲು ಪ್ರಯತ್ನಿಸಿತು ಎಂದು ಸ್ಥಳೀಯ ಮಾಧ್ಯಮ ಸಂಸ್ಥೆ ವರದಿ ಮಾಡಿದೆ.

# ಐದು ದಿನ ರಾಜ್ಯದಲ್ಲಿ ಚಳಿ



**ಬೆಂಗಳೂರು,ಡಿ.19–**ರಾಜ್ಯಾದ್ಯಂತ ಭಾರೀ ಚಳಿ ಮುಂದುವರೆದಿದೆ, ಮುಂದಿನ ಐದು ದಿನಗಳ ಕಾಲ ಹಲವಾರು ಜಿಲ್ಲೆಗಳಲ್ಲಿ ಶೀತಗಾಳಿ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕೆಲವು ಪ್ರದೇಶಗಳಲ್ಲಿ ತೀವ್ರ ಚಳಿ ಇರುವುದರಿಂದ ಜನರು ಆತಂಕಕ್ಕೊಳಗಾಗಿದ್ದಾರೆ. ಹಲವೆಡೆ ತಾಪಮಾನ ಕುಸಿಯುತ್ತಿದೆ. ಹವಾಮಾನ ಇಲಾಖೆ ಎರಡು ದಿನಗಳ ಕಾಲ ಶೀತಗಾಳಿಯ ಎಚ್ಚರಿಕೆ ನೀಡಿದೆ. ರಾಜ್ಯಾದ್ಯಂತ ತಾಪಮಾನ ತೀವ್ರವಾಗಿ ಇಳಿಯುವ ನಿರೀಕ್ಷೆಯಿದೆ. ಕೆಲವು ಸ್ಥಳಗಳಲ್ಲಿ ಕನಿಷ್ಠ ತಾಪಮಾನ 9 ಡಿಗ್ರಿ ಸೆಲ್ಸಿಯಸ್‌ಗೆ ಇಳಿಯುವ ನಿರೀಕ್ಷೆಯಿದೆ.

ಕೆಲವು ಜಿಲ್ಲೆಗಳಲ್ಲಿ ಶೀತಗಾಳಿ ಬೀಸುವ ಸಾಧ್ಯತೆ ಇದೆ. ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ವಿಜಯಪುರ ಜಿಲ್ಲೆಗಳಿಗೆ ಕಿತ್ತಳೆ ಎಚ್ಚರಿಕೆ ನೀಡಲಾಗಿದೆ. ಚಿಕ್ಕಮಗಳೂರು, ಶಿವಮೊಗ್ಗ, ಬಾಗಲಕೋಟೆ, ಬೆಳಗಾವಿ, ಕೊಪ್ಪಳ, ಗದಗ, ಧಾರವಾಡ, ಹಾವೇರಿ, ದಾವಣಗೆರೆ, ಹಾಸನ ಮತ್ತು ಮೈಸೂರು ಜಿಲ್ಲೆಗಳಿಗೆ ಹಳದಿ ಎಚ್ಚರಿಕೆ ನೀಡಲಾಗಿದೆ.

ಮುಂದಿನ ಎರಡು ದಿನಗಳಲ್ಲಿ ಒಳನಾಡಿನ ಕನಿಷ್ಠ ತಾಪಮಾನದಲ್ಲಿ ಯಾವುದೇ ಗಮನಾರ್ಹ ಬದಲಾವಣೆ ಇರುವುದಿಲ್ಲ.

ನಂತರ ತಾಪಮಾನವು 2 ರಿಂದ 3 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಇಲಾಖೆ ಸಲಹೆ ನೀಡಿದೆ.

ಬೆಂಗಳೂರಿನಲ್ಲಿ ತಾಪಮಾನವು 12ಲಿಅ ಮತ್ತು 14ಲಿಅ ನಡುವೆ ಇರಲಿದೆ. ಉತ್ತರ ಭಾರತದಿಂದ ಬರುವ ಒಣ ಗಾಳಿಯು ಶೀತ ಮಾರುತಕ್ಕೆ ಕಾರಣವಾಗಿದೆ. ಡಿಸೆಂಬರ್ 17 ರ ನಂತರ ಶೀತ ಮಾರುತ ಸ್ವಲ್ಪ ಕಡಿಮೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

# ಶಾಲೆಗಳಿಗೆ ಬಸವೇಶ್ವರ ರೇಣುಕಾಚಾರ್ಯರ ಭಾವಚಿತ್ರ

**ಬಳ್ಳಾರಿ,ಡಿ.19–** ನಗರದ ಸರ್ಕಾರಿ, ಖಾಸಗಿ, ಅನುದಾನಿತ ಶಾಲೆಗಳಿಗೆ ನಗರದ ವೀರಶೈವ ಲಿಂಗಾಯತ ಸಮಾಜದಿಂದ ಜಗದ್ಗುರು ರೇಣುಕಾಚಾರ್ಯರ ಹಾಗೂ ಸಾಂಸ್ಕೃತಿಕ ನಾಯಕ ಬಸವಣ್ಣನವರ ಭಾವಚಿತ್ರಗಳನ್ನು ಕೊಡುಗೆಯಾಗಿ ನೀಡುವುದರ ಜೊತೆಗೆ ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ವೀರಶೈವ ಲಿಂಗಾಯತ ಸಮಾಜದ ಕ್ಯಾಲೆಂಡರ್ ಗಳನ್ನು ನೀಡಲಾಗುತ್ತಿದೆ.



ನಗರದ ವಿಝಡಂ ಲ್ಯಾಂಡ ಶಾಲೆಯ ಮುಖ್ಯಸ್ಥ ಕಟ್ಟೆಗೌಡ ಅವರಿಗೆ ಸಮಾಜದ. ಮುಖಂಡರುಗಳಾದ ಎಂ.ಚಂದ್ರಮೌಳಿ, ವೀರೇಶ್ ಗಂಗಾವತಿ, ಹೂಗಾರ್ ಸುರೇಶ್, ಅಂಗಡಿವೀರೇಶ್, ಗುರುಶಾಂತ ಮೊದಲಾದವರು ಶಾಲೆಗಳಿಗೆ ತೆರಳಿ ಬಸವೇಶ್ವರ ಮತ್ತು ರೇಣುಕಾಚಾರ್ಯರ ಭಾವಚಿತ್ರದ ಜೊತೆ ಆಶಾಲೆಯ ಸಿಬ್ಬಂದಿಗೆ ಮತ್ತು ಜ.11 ರಂದು ವುಂಕಿ ಮರಿಸಿದ್ದಮ್ಮ ಶಾಲೆಯಲ್ಲಿ ಹಮ್ಮಿಕೊಂಡಿರುವ ಸಿದ್ಧಾಂತ ಶಿಖಾಮಣಿ, ಹಾಗು ಬಸವಣ್ಣನವರ ವಚನಗಳ ವಾಚನ ಮತ್ತು ಬರಹದ ಸ್ಪರ್ಧೆಯಲ್ಲಿ ಭಾಗವಹಿಸಿವ ವಿದ್ಯಾರ್ಥಿಗಳಿಗೆ 2026 ರ ಕ್ಯಾಲೆಂಡರ್ ಸಹ ವಿತರಿಸುತ್ತಿದ್ದಾರೆ.

## ಡಿ.20ರಂದು ನಗರದಲ್ಲಿ ನಿರಂತರ ವಿದ್ಯುತ್ ಪೂರೈಕೆ

**ರಾಯಚೂರು,ಡಿ.19–** ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ನಿಮಿತ್ತ ಇಲ್ಲಿನ ಜೆಸ್ಕಾಂ ನೋಡಲ್ ಆಫೀಸರ್ 220ಕೆವಿ ಸ್ವೀಕರಣ ಕೇಂದ್ರದ ಕೆಪಿಟಿಸಿಎಲ್‌ನಿಂದ ಡಿಸೆಂಬರ್ 20ರಂದು ನಿಗದಿಯಾಗಿದ್ದ ವಿದ್ಯುತ್ ವ್ಯತ್ಯಯ ನಿರ್ಧಾರವನ್ನು ಕೈಬಿಟ್ಟು ನಗರದಲ್ಲಿ ನಿರಂತರವಾಗಿ ವಿದ್ಯುತ್ ಪೂರೈಕೆ ಮಾಡಲಾಗುವುದು ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಸೆಂಬರ್ 22ರಂದು ಉದ್ಯೋಗಕ್ಕಾಗಿ ಸಂದರ್ಶನ

**ರಾಯಚೂರು,ಡಿ.20–** ನಗರದ ಮಾಣಿಕ ನಗರದಲ್ಲಿ ಡಿಸೆಂಬರ್ 22ರ ಬೆಳಿಗ್ಗೆ 10 ಗಂಟೆಗೆ ಉದ್ಯೋಗಕ್ಕಾಗಿ ಸಂದರ್ಶನವು ಆಯೋಜಿಸಲಾಗಿದೆ. ಐ,ಟಿ,ಐ,ಕೋರ್ಸನ ಎಲೆಕ್ಟ್ರೀಶೀಯನ್, ಎಲೆಕ್ಟ್ರಾನಿಕ್, ಮೆಕ್ಯಾನಿಕ್, ಫೀಟರ್, ಟರ್ನರ್, ಎಮ್,ಎಮ್,ವಿ, ಎಮ್,ಆರ್,ಎಸಿ, ವೆಲ್ಡರ್, ಕೋಪಾ ವೃತ್ತಿಯ ತರಬೇತುದಾರರು ಮತ್ತು ಡಿಪ್ಲೋಮಾ ಹಾಗೂ ಪದವಿಯಲ್ಲಿ ಉತ್ತೀರ್ಣರಾದ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಇದರ ಸದುಪಯೋಗವನ್ನು ಪಡೆಯಬಹುದಾಗಿದೆ.

ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಹಯೋಗದಲ್ಲಿ ಉದ್ಯೋಗದ ಸಂದರ್ಶನಕ್ಕಾಗಿ ರಾಯಚೂರಿನ ಸಾವಿತ್ರಿ ಗ್ರೂಪ್, ಹೋಂಡಾ ಮೋರ್ಸ ಬೆಂಗಳೂರಿನ ಟಾಟಾ ಎಲೆಕ್ಟ್ರಿಕಲ್, ಬಳ್ಳಾರಿಯ ಜೆ,ಎಸ್.ಡಬ್ಲ್ಯು, ಕೋಲಾರದ ಟಾಟಾ ಮೋರ್ಸ, ಹೋಂಡಾ ಮೋರ್ಸ, ಕಲಬುರಗಿಯ ಅರ್ಥ ಮೂವರ್ಸ, ಬೆಂಗಳೂರಿನ ವಿಸನ್ ಇಂಡಿಯಾ ಲಿಮಿಟೆಡ್, ಹೈದ್ರಾಬಾದ್ ಎಮ್.ಆರ್,ಎಫ್ ಟೈರ್ಸ ಸೇರಿದಂತೆ ಪ್ರತಿಷ್ಠಿತ ಕಂಪನಿಗಳ ಪ್ರತಿನಿಧಿಗಳು ಆಗಮಿಸುತ್ತಿದ್ದು, ಸ್ಥಳದಲ್ಲಿಯೇ ಸಂದರ್ಶನ ನೆಡೆಸಿ ಸೂಕ್ತ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 7760776556, 9590649335, 9035064582ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರಿನ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಯಚೂರು ಗ್ರಾಮೀಣ ಪ್ರದೇಶದಲ್ಲಿ ಡಿ. 22ರಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಡಿ.19–** ಇಲ್ಲಿನ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಯ 110/11 ಕೆವಿ ಮಲಿಯಾಬಾದ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಡಿಸೆಂಬರ್ 22ರ ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆವರೆಗೆ ಮಲಿಯಾಬಾದ ವಿದ್ಯುತ್ ಉಪ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತುರ್ವಿಹಾಳ ಉಪ ಚುನಾವಣೆ; ಮದ್ಯ ಮಾರಾಟ ನಿಷೇಧಿಸಿ ಆದೇಶ

**ರಾಯಚೂರು,ಡಿ.19–** ಸಿಂಧನೂರು ತಾಲೂಕಿನ ತುರ್ವಿಹಾಳ ಪಟ್ಟಣ ಪಂಚಾಯಿತಿಯಲ್ಲಿ ತೆರವಾಗಿರುವ ಸದಸ್ಯ ಸ್ಥಾನಕ್ಕೆ ಉಪ ಚುನಾವಣೆಯ ಮತದಾನವು ಡಿಸೆಂಬರ್ 21ರಂದು ನಡೆಯಲ್ಲಿದ್ದು, ಮತದಾನವು ಸೂಸುತ್ರವಾಗಿ, ಶಾಂತಿ ರೀತಿಯಿಂದ ನಡೆಸುವ ಉದ್ದೇಶದಿಂದ ಹಾಗೂ ಕಾನೂನು ಮತ್ತು ಸುವ್ಯವಸ್ಥೆಯನ್ನು ಪಾಲಿಸುವ ಹಿತದೃಷ್ಟಿಯಿಂದ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ರೀತಿಯ ಮದ್ಯ ತಯಾರಿಕಾ ಘಟಕಗಳು, ಸಾಗಾಣಿಕೆ, ಸಂಗ್ರಹಣೆಯನ್ನು ಹಾಗೂ ಮಾರಾಟ ಮಳಿಗೆಗಳನ್ನು ಡಿ.19ರ ಸಂಜೆ 05 ಗಂಟೆಯಿಂದ ಡಿ.21ರ ಮಧ್ಯರಾತ್ರಿ 12 ಗಂಟೆವರೆಗೆ ಬಂದ್ ಇಡುವಂತೆ ಜಿಲ್ಲಾ ದಂಡಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

## ತುರವಿಹಾಳದಲ್ಲಿ ಜಾತ್ರೆ, ಸಂತೆ, ಉತ್ಸವ, ಉರುಸುಗಳ ಮುಂದೂಡಿಕೆ

**ರಾಯಚೂರು.ಡಿ.19–** ಸಿಂಧನೂರು ತಾಲೂಕಿನ ತುರವಿಹಾಳದಲ್ಲಿ ಡಿ.21ರಂದು ಪಟ್ಟಣ ಪಂಚಾಯತಿ ಉಪ ಚುನಾವಣೆ ನಡೆಯಲಿದ್ದು, ಆದ್ದರಿಂದ ಅಂದು ತುರವಿಹಾಳ ಪಟ್ಟಣ ಪಂಚಾಯಿತಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ನಡೆಯುವ ಜಾತ್ರೆ, ಜಾನುವಾರ ಸಂತೆ, ಉತ್ಸವ, ಉರುಸು ಹಾಗೂ ಮುಂತಾದವುಗಳನ್ನು ಮುಂದೂಡಿ ಜಿಲ್ಲಾ ದಂಡಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

## ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕ್ರಿಕೆಟ್ ಪಂದ್ಯಾವಳಿಗೆ ಗ್ರೀನ್ ಸಿಗ್ನಲ್, ಮಾರ್ಗಸೂಚಿ ಸಿದ್ಧತೆ



**ಬೆಂಗಳೂರು,ಡಿ.19–**ನಗರದ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕ್ರಿಕೆಟ್ ಪಂದ್ಯಗಳನ್ನು ಪುನರಾರಂಭಿಸಲು ಅಂತಿಮವಾಗಿ ಗ್ರಿನ್ ಸಿಗ್ನಲ್ ದೊರೆತಿದೆ. ಆರ್‌ಸಿಬಿ ತಂಡದ ವಿಜಯೋತ್ಸವದ ಸಂದರ್ಭದಲ್ಲಿ ಉಂಟಾದ ಕಾಲ್ತುಳಿತದ ಘಟನೆಯ ನಂತರ ಕ್ರಿಡಾಂಗಣದಲ್ಲಿ ಕ್ರಿಕೆಟ್ ಪಂದ್ಯಾವಳಿಗಳನ್ನು ಆಯೋಜಿಸುವುದಕ್ಕೆ ಅನುಮತಿ ನಿರಾಕರಿಸಲಾಗಿತ್ತು.ಇದೀಗ ನಗರ ಪೊಲೀಸರು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಗೆ ಕಟ್ಟುನಿಟ್ಟಾದ 17 ಅಂಶಗಳ ಮಾರ್ಗಸೂಚಿಯನ್ನು ಸಿದ್ದಪಡಿಸಿ ಕ್ರಿಕೆಟ್ ಪಂದ್ಯಗಳ ಆಯೋಜನೆಗೆ ಅನುಮತಿ ನೀಡಲು ಸಜ್ಜಾಗಿದ್ದಾರೆ.

ಗೃಹ ಇಲಾಖೆ ಸಿದ್ದ ಪಡಿಸಿರುವ ಷರತ್ತುಗಳ ಕುರಿತು ಕೆಎಸ್‌ಸಿಎ ಪದಾಧಿಕಾರಿಗಳು ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಅವರ ನೇತೃತ್ವದಲ್ಲಿ ಗೃಹ ಸಚಿವರನ್ನು ಭೇಟಿ ಮಾಡಿ ಚರ್ಚಿಸಲಿದ್ದಾರೆ.ನಗರ ಪೊಲೀಸ್ ಆಯುಕ್ತರು ಸಮಿತಿ ವರದಿಯ ಶಿಫಾರಸ್ಸುಗಳನ್ನು ಆಧರಿಸಿ ಕಾಲ್ತುಳಿತದಂತಹ ಘಟನೆಗಳು ಪುನರಾವರ್ತನೆಯಾಗದಂತೆ ತಡೆಯಲು 17 ಮಾರ್ಗಸೂಚಿಗಳನ್ನು ಸಿದ್ದಪಡಿಸಿದ್ದಾರೆ. ಕೆಎಸ್‌ಸಿಎ ಈ ಷರತ್ತುಗಳನ್ನು ಈಡೇರಿಸಿದ ತಕ್ಷಣವೇ ಪಂದ್ಯಗಳನ್ನು ಆಯೋಜಿಸಲು ಅನುಮತಿ ನೀಡಲಾಗುತ್ತದೆ. Green signal for cricket tournament at Chinnaswamy Stadium

**ಮಾರ್ಗಸೂಚಿಯಲ್ಲಿ ಏನಿದೆ?:**

33 ಸಾವಿರ ಸಾಮರ್ಥ್ಯದ ಕ್ರೆಡಾಂಗಣದ ಸುತ್ತ ಪಾರ್ಕಿಂಗ್ ಪಿಕ್ ಅಂಡ್ ಡ್ರಾಪ್ ಗೆ ವ್ಯವಸ್ಥೆ ಮಾಡಬೇಕು.ಪ್ರವೇಶ ದ್ವಾರಗಳು ಟ್ ಪಾತ್ ಗಳ ಮೇಲೆಯೇ ಇರೋದ್ರಿಂದ ಪ್ರೀಕ್ಷಕರು ಕ್ಯೂ ನಿಲ್ಲುವುದಕ್ಕೆ ಕೆಎಸ್‌ಸಿಎ ಸ್ವತ್ತಿನಲ್ಲಿ ಪ್ರತ್ಯೇಕ ವ್ಯವಸ್ಥೆ ಮಾಡಬೇಕು.

ಕಿರಿದಾದ ಗೇಟ್ ಗಳನ್ನ ಕನಿಷ್ಠ 6 ಅಡಿ ಅಗಲ, ಉಬ್ಬು ತಗ್ಗು, ಮೆಟ್ಟಿಲುಗಳನ್ನ ಸರಿಪಡಿಸಿ, ಎಂಟ್ರಿ ಎಕ್ಸಿಟ್ ಸುಲಭಗೊಳಿಸಬೇಕು.ಅಂತರಾಷ್ಟ್ರಿಯ ಪಂದ್ಯಾವಳಿಗಳ ವೇಳೆ ಮಹಿಳೆಯರು, ಮಕ್ಕಳ ಪ್ರವೇಶ ನಿರ್ಗಮನಕ್ಕೆ ಪ್ರತ್ಯೇಕ ವ್ಯಸ್ಥೆ ಮಾಡಬೇಕು.ತುರ್ತು ಪರಿಸ್ಥಿತಿ ನಿಯಮಗಳಂತೆ ಆಂಬ್ಯುಲೆನ್ಸ್, ವೈದ್ಯಕೀಯ, ಆಂಬ್ಯುಲೆನ್ಸ್ ಗೆ ಪ್ರತ್ಯೇಕ ಮಾರ್ಗ, ಮೆಡಿಕಲ್ ಎಮೆರ್ಜೆನ್ಸಿ ತಂಡಗಳ ಶಾಶ್ವತ ವ್ಯವಸ್ಥೆ ಮಾಡಬೇಕು.

ಅಗ್ನಿಶಾಮಕ ದಳ ವಿದ್ಯುತ್ ಇಲಾಖೆಯಿಂದ ಆಡಿಟ್ ಮಾಡಿಸಿ ವರದಿ ಪಡೆಯಬೇಕು.ಸುರಕ್ಷತೆ ದೃಷ್ಟಿಯಿಂದ ಯೂನಿಕ್ ಐಡಿ ಚೆಕಿಂಗ್, ಬಾಂಬ್ ನಿಷ್ಕ್ರಿಯ ದಳ, ಮೆಟಲ್ ಡಿಟೆಕ್ಟರ್ ಅಳವಡಿಸಿ ನುರಿತ ಸಿಬ್ಬಂದಿ ತರಬೇತಿ ಸಿಬ್ಬಂದಿ ನೇಮಕ ಮಾಡಬೇಕು.

ಆಟಗಾರರಿಗೆ ಪ್ರತ್ಯೇಕವಾಗಿ ಪ್ರವೇಶ ಮತ್ತು ನಿರ್ಗಮನ ಮಾರ್ಗಗಳನ್ನ ಕಾಯ್ದಿರಿಸಬೇಕು.

ತುರ್ತು ಪರಿಸ್ಥಿತಿ ವೇಳೆ ಸಾರ್ವಜನಿಕರಿಗೆ ಸೇಫ್ಟಿ ಪಾಯಿಂಟ್ ಎಕ್ಸಿಟ್‌ಗೆ ಅಂತರಾಷ್ಟ್ರಿಯ ಮಾನದಂಡಗಳ ಯೋಜನೆ ತಯಾರಿಸಬೇಕು.ಪ್ರವೇಶ ದ್ವಾರಗಳ ಬಳಿ ಬ್ಯಾಗೇಜ್ ಸ್ಕ್ಯಾನರ್ ಗಳ ಅಳವಡಿಸಿ ಸಿಸಿಟಿವಿ ಕಣ್ಗಾವಲಿನಲ್ಲಿ ದೀರ್ಘಾವಧಿ ಸ್ಟೊ?ರೆಜ್ ವ್ಯವಸ್ಥೆ ಮಾಡಬೇಕು.

*ಕೆಲಸಗಾರರು, ಸೆಕ್ಯೂರಿಟಿ ಗಾರ್ಡ್, ಮಳಿಗೆ ಇಡುವವರ ಬಗ್ಗೆ ಪೊಲೀಸ್ ವೆರಿಫಿಕೇಷನ್ ಸರ್ಟಿಫಿಕೇಟ್ ಜೊತೆ ಸೆಕ್ಯೂರಿಟಿ ಏಜೆನ್ಸಿಗಳ ಲೈಸ್ಸೆನ್ಸ್ ಪಡೆಯಬೇಕು.ಪಂದ್ಯದ ವೇಳೆ ಒಳಗಡೆ ಮಾರಾಟ ಮಾಡುವ ತಿಂಡಿ, ತಿನಿಸುಗಳ ಪರಿಶೀಲನೆಗೆ ನಿರ್ದಿಷ್ಟ ಮಾನದಂಡ ನಿಗದಿಪಡಿಸಬೇಕು.ಸಾರ್ವಜನಿಕ ಸಾರಿಗೆ ಮೂಲಕ ಬರುವ ಪ್ರೀಕ್ಷಕರ ಪ್ರವೇಶ ಮತ್ತು ನಿರ್ಗಮನಕ್ಕೆ ಸರಿಯಾದ ವ್ಯವಸ್ಥೆ ಮಾಡಬೇಕು.

ಅಂತರಾಷ್ಟ್ರಿಯ ಗುಣಮಟ್ಟದ ಗುಂಪು ನಿರ್ವಹಣೆ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಮಾಡಬೇಕು.ಪ್ರೀಕ್ಷಕರ ಪ್ರವೇಶ ಸಂಖ್ಯೆ ನಿಖರತೆಗಾಗಿ ವ್ಯವಸ್ಥೆ ಮಾಡಬೇಕು.ಟಿಕೆಟ್ ವಿಚಾರಣೆ, ಮಾರಾಟ, ವೇಟಿಂಗ್ ಮಾಡುವರಿಗೆ ಪ್ರತ್ಯೇಕ ಸ್ಥಳಗಳನ್ನ ವ್ಯವಸ್ಥೆ ಮಾಡಬೇಕು ಹಾಗೂ ಇನ್ನಿತರ ಮಾರ್ಗಸೂಚಿಗಳನ್ನು ಸಿದ್ದಪಡಿಸಲಾಗಿದೆ.

# ಉತ್ತಮ ದೃಷ್ಟಿ ಇಲ್ಲದೆ ಹೊಸ ಸೃಷ್ಟಿ ಸಾಧ್ಯವಿಲ್ಲ



**ಕಲಬುರಗಿ:ಡಿ.19–**ಉತ್ತಮ ದೃಷ್ಟಿ ಇಲ್ಲದೆ ಹೊಸ ಸೃಷ್ಟಿ ಸಾದ್ಯವಿಲ್ಲ. ಅಂದರೆ ದೃಷ್ಟಿಯೇ ಸರ್ವ ಸೃಷ್ಟಿಗಳ ಮೂಲ. ದೃಷ್ಟಿ ಇಲ್ಲದೆ ಮಾನವ ಜನಾಂಗದ ಅಸ್ಥಿತ್ವವಾಗಲಿ ಅಥವಾ ಅರಿವಾಗಲಿ ಅಸಾಧ್ಯ. ಹೊಸ ದೃಷ್ಟಿಯೇ ಸರ್ವ ಸೃಷ್ಟಿಗಳ ಸತ್ವ ಮತ್ತು ತತ್ವ. ಸಮಕಾಲೀನ ಸಮಾಜದಲ್ಲಿ ಎಲ್ಲಾ ದಾನಗಳಿಗಿಂತ ಶ್ರೇಷ್ಟವಾದ ದಾನ ನೇತ್ರದಾನ. ನೇತ್ರದಾನ ಮಾಡುವುದರ ಮೂಲಕ ನೇತ್ರಹೀನರ ಬದುಕು ಬದಲಾಯಿಸಬೇಕೆಂದು ಯಾದಗಿರಿಯ ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ನಿವೃತ್ತ ಪ್ರಾಂಶುಪಾಲರಾದ ಪ್ರೊ.ಸರ್ವೋದಯ ಶಿವಪುತ್ರ ಅವರು ಹೇಳಿದರು.

ಆದರ್ಶ ನಗರದ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಸರ್ವೋದಯ ಎಜುಕೇಶನಲ್ ಅಂಡ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಕಣ್ಣಿನ ಮಹತ್ವ: ಅರಿವು–ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕಣ್ಣು ಕೇವಲ ದೇಹದ ಒಂದು ಅಂಗ ಮಾತ್ರವಲ್ಲ. ಅದು ಮಾನವನ ನಾಗರಿಕತೆಯ ಇತಿಹಾಸದ ಸಂಕೇತವೆಂದರು. ಮಾನವನು ಪ್ರಾಚೀನ ಸಂಸ್ಕೃತಿ ಮತ್ತು ನಾಗರಿಕತೆಯ ಹಲವು ಆಯಾಮಗಳನ್ನು ಅರಿತುಕೊಂಡಿದ್ದೇ ಕೇವಲ ಕಣ್ಣಿನ ಮೂಲಕ ಮಾತ್ರ. ಅರಿವು ಇಲ್ಲದ ನೆರವು ಕೇವಲ ಕರುಣೆಯಾಗಿ ಉಳಿಯುತ್ತದೆ. ನೆರವು ಇಲ್ಲದ ಅರಿವು ಗ್ರಂಥಗಳಲ್ಲೆ ನೆಲೆ ನಿಲ್ಲುತ್ತದೆ.ಇವೆರಡೂ ಸಂಗತಿಗಳು ಒಂದಾದಾಗಲೇ ಸಮಾಜದಲ್ಲಿ ಶಾಶ್ವತ ಬದಲಾವಣೆ ಸಂಭವಿಸುತ್ತದೆ ಎಂದರು. ನೇತ್ರದ ಮೂಲಕ ಹೃದಯಕ್ಕೆ ಹೊಸ ಆಲೋಚನೆಗಳು ಬಂದಾಗಲೆ ಸಮಾಜ ತೀವ್ರವಾಗಿ ಬೆಳೆಯುತ್ತದೆ ಮತ್ತು ಬದಲಾಗುತ್ತದೆ ಎಂದರು.

ಹೆಬ್ಬಾಳ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ಮುಖ್ಯಸ್ಥರಾದ ಡಾ.ಸಂತೋಷ ಪಾಟೀಲ ಹೆಬ್ಬಾಳ ಮಾತನಾಡಿ ನಮ್ಮ ಕಣ್ಣುಗಳು ಸದುಪಯೋಗಕ್ಕಿಂತ ದುರುಪಯೋಗವೇ ಜಾಸ್ತಿ. ಆದರೆ ಕಣ್ಣಿನ ಸದುಪಯೋಗದ ಮೂಲಕ ಸಮ ಸಮಾಜವನ್ನು ಸೃಷ್ಟಿ ಮಾಡಬೇಕೆಂದರು. ಆಧುನಿಕ ಜೀವನ ಶೈಲಿ ನಮ್ಮ ಕಣ್ಣುಗಳನ್ನು ಹಾಳು ಮಾಡುತ್ತಿದೆ.ಅದರಲ್ಲೂ ಸಹಿತ ಕೋವಿಡ್ ಕಾಲ ಘಟ್ಟದಲ್ಲಿ ಆಓಈಲೈನ್ ಕಲಿಕೆಯ ಮೂಲಕ ವಿದ್ಯಾರ್ಥಿಗಳಲ್ಲಿ ಕಣ್ಣಿನ ಸಮಸ್ಯೆ ಇನ್ನಷ್ಟು ಹೆಚ್ಚಳವಾಗಿದೆ ಮತ್ತು ಆನಂತರದಲ್ಲೂ ಅದು ನಿರಂತರವಾಗಿ ಮುಂದುವರೆದಿದೆ ಎಂದರು. ಕಣ್ಣು ನಮ್ಮ ದೇಹದ ಅತ್ಯಂತ ಮಹತ್ವದ ಅಂಗ. ಕಣ್ಣಿನ ಆರೋಗ್ಯ ಕಾಪಾಡುವುದರ ಮೂಲಕ ದೇಹದ ಆರೋಗ್ಯವನ್ನು ವೃದ್ಧಿಸಬೇಕೆಂದು, ಕಣ್ಣಿನ ಸಂರಕ್ಷಣೆ ನಮ್ಮೆಲ್ಲರ ಹೊಣೆ ಎಂದರು. ನಾವು ಕಣ್ಣುಗಳನ್ನು ರಕ್ಷಿಸಿದರೆ ಕಣ್ಣು ನಮ್ಮನ್ನು ರಕ್ಷಿಸುತ್ತದೆ ಎಂದು ನುಡಿದರು.ಕೃತಕ ಕಣ್ಣಿನ ಪ್ರಾತ್ಯಕ್ಷಿಕೆಯೆ ಮೂಲಕ ಕಣ್ಣಿನ ಮಹತ್ವ ಮತ್ತು ಮಹತಿಯನ್ನು ವಿವರಿಸಿ ವಿಶ್ಲೇಷಿಸಿದರು. ಅದೇ ರೀತಿಯಾಗಿ ಜೇವರ್ಗಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಪ್ರಾಧ್ಯಾಪಕರಾದ ಡಾ,ಖಾಜಾವಲಿ ಈಚನಾಳ ಅವರು ಮಾತನಾಡಿ ಪಂಚೇಂದ್ರಿಯಗಳಲ್ಲೇ ಅತ್ಯಂತ ಶ್ರೇಷ್ಠವಾದ ಅಂಗವೆಂದರೆ ಕಣ್ಣು. ನಮ್ಮ ದೃಷ್ಟಿಯನ್ನು ಸಮಾಜದಲ್ಲಿ ಹೊಸದನ್ನು ಸೃಷ್ಟಿ ಮಾಡಲು ಬಳಕೆ ಮಾಡಿಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಕಣ್ಣು ಇಲ್ಲದೆ ಇದ್ದರೆ ಇಡೀ ಜಗತ್ತೇ ಕತ್ತಲೆ. ದೃಷ್ಟಿ ಕಳೆದುಕೊಂಡರೆ ಮನುಷ್ಯ ಎಲ್ಲವನ್ನೂ ಕಳೆದುಕೊಂಡಂತೆ ಎಂದರು. ಮಾನವನಿಗೆ ಮೇದುಳು ಎಷ್ಟು ಮುಖ್ಯವೋ ಕಣ್ಣು ಕೂಡ ಅಷ್ಟೇ ಮುಖ್ಯ ಎಂದು ಮಾರ್ಮಿಕವಾಗಿ ಮಾತನಡಿದರು.

. ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷರಾದ ಡಾ.ಸಂಗೀತಾ ಸೈದಾಪೂರ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಹೈದ್ರಾಬಾದ ಕರ್ನಾಟಕ ಸರಕಾರಿ ಕಾಲೇಜಿನ ವಿಭಾಗೀಯ ಅಧ್ಯಕ್ಷರಾದ ಡಾ.ಶರಣಪ್ಪ ಸೈದಾಪೂರ, ಟ್ರಸ್ಟನ ಕಾರ್ಯದರ್ಶಿಯಾದ ಶ್ರೀ ರಾಜು ದೋಟಿಕೊಳ ಮತ್ತು ಬಬ್ಬರ ಕಮಕನೂರು ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಕಾಲೇಜಿನ ಪ್ರಾಚಾರ್ಯರಾದ ರಾಜು ಗಂಗಾಧರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು. ಸದರಿ ಕಾಲೇಜಿನ ಕನ್ನಡ ಉಪನ್ಯಾಸಕರಾದ ಶ್ರೀ ವಿಠಲ ಭಾವಿಮನಿ ಅವರು ಕಾರ್ಯಕ್ರಮವನ್ನು ನಿರೂಪಿಸಿದರು. ಕಾಲೇಜಿನ ಗಣಿತಶಾಸ್ತ್ರದ ಉಪನ್ಯಾಸಕರಾದ ನರಸಪ್ಪ ರಂಗೋಲಿ ಅವರು ಅತಿಥಿಗಳಿಗೆ ಸ್ವಾಗತಿಸಿದರು. ಕುಮಾರಿ ಮೇಘಾ ಪ್ರಾರ್ಥಿಸಿದರು. ಶಿವಕುಮಾರ ಯರಿಗೇರಿ, ಗಾಂಧಿ ಸೂರಚಂದ, ಶ್ರೀಮತಿ ಲೀಲಾವತಿ, ಜಗದೇವಿ, ಶ್ರೀಮತಿ ಬನಶಂಕರಿ, ಶ್ರೀಮತಿ ಸವಿತಾ, ಶ್ರೀಮತಿ ಜಯಶ್ರೀ ಪಾಟೀಲ್ ಮತ್ತು ಭೂಪಾಲರಾವ ಇನ್ನೀತರರು ಉಪಸ್ಥಿತರಿದ್ದರು. ನೂರಾರು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

## ಪ್ರತಿಯೊಬ್ಬ ವ್ಯಕ್ತಿಗೂ ಉತ್ತಮ ಆರೋಗ್ಯ ಸೇವೆ ಖಚಿತಪಡಿಸಬೇಕು:ಶ್ರೀನಿವಾಸ ನವಲೆ



**ಕಲಬುರಗಿ,ಡಿ.19–** ಸಾಮಾಜಿಕ ಹಾಗೂ ಆರ್ಥಿಕ ಹಿನ್ನೆಲೆ ಏನೇ ಆಗಿದ್ರೂ ಸಹ ದೇಶದ ಪ್ರತಿಯೊಬ್ಬ ನಾಗರಿಕನಿಗೆ ಉತ್ತಮ ಆರೋಗ್ಯ ಸೇವೆಗಳನ್ನು ಒದಗಿಸುವುದನ್ನು ಆರೋಗ್ಯ ಇಲಾಖೆಯ ಜವಾಬ್ದಾರಿಯಾಗಿದ್ದು, ಅದನ್ನು ಇಲಾಖೆ ಖಚಿತಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯಾಗಿರುವ ಹಿರಿಯ ಸಿವಿಲ್ ನ್ಯಾಯಾಧೀಶ ಶ್ರೀನಿವಾಸ ನವಲೆ ತಿಳಿಸಿದರು.

ಬುಧವಾರ ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವವರುಗಳ ಸಂಯುಕ್ತಾಶ್ರಯದಲ್ಲಿ ಡಿ.ಎಚ್.ಓ. ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ ಸಾರ್ವತ್ರಿಕ ಆರೋಗ್ಯ ರಕ್ಷಣಾ ದಿನವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿಶೇಷವಾಗಿ ಅನಕ್ಷರಸ್ಥರು, ಬಡವರು ಮತ್ತು ಹಿಂದುಳಿದ ಜನರಿಗೆ ಆರೋಗ್ಯದ ಕುರಿತು ಹೆಚ್ಚಿನ ಅರಿವು ಮೂಡಿಸಬೇಕಿದ್ದು, ಆ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ. ವೈದ್ಯ ಸಿಬ್ಬಂದಿಗಳು ಇದನ್ನು ಇತರೆ ವೃತ್ತಿಯಂತೆ ನೋಡದೆ ಸೇವಾ ಮನೋಭಾವನೆಯಿಂದ ಕೆಲಸ ಮಾಡಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ ಅವರು ಪ್ರಾಸ್ತಾವಿಕ ಮಾತನಾಡಿ, ಆರೋಗ್ಯವು ಪ್ರತಿಯೊಬ್ಬ ನಾಗರಿಕನ ಮೂಲಭೂತ ಮಾನವ ಹಕ್ಕಿನಲ್ಲಿ ಒಂದಾಗಿದೆ. ಕೈಗೆಟುಕುವ ಮತ್ತು ಗುಣಮಟ್ಟದ ಸಮಾನ ಆರೋಗ್ಯ ಸೇವೆಗಳನ್ನು ಎಲ್ಲರಿಗೂ ಒದಗಿಸುವ ಸಂಕಲ್ಪದೊಂದಿಗೆ ಇಂದಿಲ್ಲಿ ಅಂತರಾಷ್ಟ್ರೀಯ ಸಾರ್ವತ್ರಿಕ ಆರೋಗ್ಯ ರಕ್ಷಣಾ ದಿನವನ್ನು ಅರ್ಥಪೂರ್ಣವಾಗಿ ಆಚರಣೆ ಮಾಡಲಾಗುತ್ತಿದೆ. ಜಿಲ್ಲೆಯ ಎಲ್ಲಾ ಆರೋಗ್ಯ ಕಾರ್ಯಕ್ರಮ ಅನುಷಾನ ಅಧಿಕಾರಿಗಳು ಮತ್ತು ಸಿಬ್ಬಂದಿ ಸತತ ಪ್ರಯತ್ನದ ಫಲವಾಗಿ ಇಂದು ಕಲಬುರಗಿ ಜಿಲ್ಲೆ ರಾಜ್ಯದಲ್ಲಿ ಉತ್ತಮ ಆರೋಗ್ಯ ಸೇವೆ ಒದಗಿಸುವ ಜಿಲ್ಲೆಗಳ ಸಾಲಿನಲ್ಲಿ ನಿಂತಿದೆ ಎಂದರು.

ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಪ್ರಾದೇಶಿಕ ತರಬೇತಿ ಕೇಂದ್ರದ ಪ್ರಾಂಶುಪಾಲ ಡಾ. ದೀಪಕ ಸುಕೆ, ಜಿಲ್ಲಾ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಡಾ. ರವಿಕಾಂತಿ ಕ್ಯಾತನಾಳ, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ. ಸಿದ್ರಾಮಪ್ಪಾ ಪಾಟೀಲ, ಜಿಲ್ಲಾ ಕುಷ್ಠರೋಗ ಅಧಿಕಾರಿ ಡಾ. ವಿವೇಕಾನಂದ ರೆಡ್ಡಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾ. ಚಂದ್ರಕಾಂತ ನರಿಬೋಳ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶಿವಶರಣಪ್ಪ ಭೂಸನೂರ, ಜಿಲ್ಲಾ ಸಮೀಕ್ಷಣಾ ಅಧಿಕಾರಿಗಳು ಡಾ. ರಾಕೇಶ ಕಾಂಬಳೆ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಸೋಮು ರಾಠೋಡ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲೂಕಾ ಆರೋಗ್ಯ ಅಧಿಕಾರಿಗಳು, ಕಾರ್ಯಕ್ರಮ ವ್ಯವಸ್ಥಾಪಕರು, ಸಮಾಲೋಚಕರು, ಸಂಯೋಜಕರು, ಆರೋಗ್ಯ ಇಲಾಖೆಯ ಇತರೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಮತ್ತು ಆಶಾ ಕಾರ್ಯಕರ್ತೆಯರು ಭಾಗವಹಿಸಿದರು.

# ಬಾಲ್ಯ ವಿವಾಹ ಪದ್ಧತಿ ನಿರ್ಮೂಲನೆ ಕಾರ್ಯಕ್ಕೆ ಸರ್ವರೂ ಕೈಜೋಡಿಸಬೇಕು

ಧೈರ್ಯದ ದಾರಿ

**ರಾಯಚೂರು,ಡಿ.19–**ಸಾಮಾಜಿಕ ಪಿಡು ಗಾಗಿ ಪರಿಣಮಿಸಿದ ಬಾಲ್ಯ ವಿವಾಹದಿಂ ದಾಗಿ ಮಕ್ಕಳ ಭವಿಷ್ಯ ಹಾಳಾಗುತ್ತಿದೆ. ಆದ್ದರಿಂದ ಸರ್ಕಾರದ ಜೊತೆ ಎಲ್ಲರೂ ಸೇರಿ ಜಾಗೃತಿ ಮೂಡಿಸಿದಾಗ ಬಾಲ್ಯ ವಿವಾಹ ಪದ್ಧತಿಯನ್ನು ನಿರ್ಮೂಲನೆ ಮಾಡಲು ಸಾಧ್ಯವಾಗುತ್ತದೆ ಎಂದು ಕರ್ನಾ ಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ವೆಂಕಟೇಶ್ ಅವರು ತಿಳಿಸಿದರು.

ಡಿಸೆಂಬರ್ 19ರ ಶುಕ್ರವಾರ ದಂದು ನಗರದ ಮಾಣಿಕ್ ಪ್ರಭು ಅಂಧ ಮಕ್ಕಳ ಶಾಲೆಯಲ್ಲಿ ಎಂ.ಆರ್.ಡಬ್ಲ್ಯೂ ಮತ್ತು ವಿ.ಆರ್.ಡಬ್ಲ್ಯೂಗಳಿಗೆ ಮಕ್ಕಳ ರಕ್ಷಣಾ ಕಾನೂನುಗಳ ಕುರಿತು ಹಮ್ಮಿಕೊಂಡಿದ್ದ ತರಬೇತಿ ಕಾರ್ಯಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹದಿಂದ ಮಕ್ಕಳ ಶಿಕ್ಷಣ ಮೊಟಕಾಗುತ್ತದಲ್ಲದೆ ಅವರ ಭವಿಷ್ಯ ನಾಶವಾಗಲಿದೆ. ಮಕ್ಕಳ ಮೇಲೆ ಅನೇಕ ರೀತಿಯಲ್ಲಿ ದುಷ್ಪರಿಣಾಮ ಉಂಟು ಮಾಡುವ ಈ ಕೆಟ್ಟ ಪದ್ಧತಿ ಬಗ್ಗೆ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದರು.




ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಮಕ್ಕಳಿಗೆ ಸುರಕ್ಷಿತ ವಾತಾವರಣ ಕಲ್ಪಿಸುವುದು ಇಂದಿನ ಅಗತ್ಯವಾಗಿದೆ. ಎಲ್ಲಾ ಇಲಾಖೆಗಳ ಎಲ್ಲಾ ಹಂತದ ಅಧಿಕಾರಿಗಳು ಹಾಗೂ ಸಾರ್ವಜನಿಕರು ಈ ಬಗ್ಗೆ ಅರಿಯಬೇಕು.

ಮಕ್ಕಳು, ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ಗೀಳಿಗೆ ಬಿದ್ದು, ಆನ್ಲೈನ್ ವಂಚಕರ ಜಾಲಕ್ಕೆ ಬಲಿ ಆಗುತ್ತಿರುವದು ಕೂಡ ಹೆಚ್ಚಾಗುತ್ತಿದ್ದು, ಈ ಬಗ್ಗೆಯೂ ಕೂಡ ಜಾಗೃತಿ ಮೂಡಿಸಿ ಮಕ್ಕಳನ್ನು ರಕ್ಷಿಸುವ ಕೆಲಸ ಮಾಡಬೇಕು ಎಂದರು.

ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಅಮ ರೇಶ್ ಹಾವಿನ ಅವರು ಪ್ರಾಸ್ತಾವಿಕ ಮಾತನಾಡಿದರು.

ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಸುದರ್ಶನ್ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೊಸಗಿ ಅವರು ಕಾರ್ಯ ಕ್ರಮ ವನ್ನು ಉದ್ದೇಶಿಸಿ ಮಾತನಾಡಿದರು. ಸಂಪನ್ಮೂಲ ವ್ಯಕ್ತಿ ರಾಜೇಂದ್ರ ಅವರು ಮಕ್ಕಳ ರಕ್ಷಣಾ ಕಾನೂನುಗಳ ಕುರಿತು ಉಪನ್ಯಾಸ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ವಿಕಲಚೇತನರ ಕಲ್ಯಾಣ ಇಲಾಖೆಯ ಅಧಿಕಾರಿ ಶ್ರೀದೇವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶರಣಮ್ಮ ಕಾರನೂರು, ಮಾಣಿಕ ಪ್ರಭು ಅಂಧಮಕ್ಕಳ ಶಾಲೆಯ ಮುಖ್ಯ ಗುರುಗಳಾದ ಆರ್.ಎಂ ಯತ್ನಳ್ಳಿ, ರಕ್ಷಣಾಧಿಕಾರಿ ಹನುಮೇಶ, ಮಕ್ಕಳ ಸಹಾಯವಾಣಿ ಸಂಯೋಜಕ ಮೋಹನ್ ಕುಮಾರ್, ರಮೇಶ್ ಅವರು ಇದ್ದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ತಿಕ್ಕಯ್ಯ ಅವರು ನಿರೂಪಿಸಿದರು. ರಕ್ಷಣಾಧಿಕಾರಿ ಅಸಾಂಸ್ಥಿಕ ಕಿರಿಲಿಂಗಪ್ಪ ಅವರು ಸ್ವಾಗತಿಸಿದರು. ಕಾನೂನು ಪರಿವೀಕ್ಷಣಾಧಿಕಾರಿ ಶಿವರಾಜ್ ಪಾಟೀಲ್ ಅವರು ವಂದಿಸಿದರು. ಹಾಗೂ ಇತರ ಸಿಬ್ಬಂದಿ ಹಾಜರಿದ್ದರು.

# ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾ ಸಮಿತಿಯ ಪದಾಧಿಕಾರಿಗಳ ನೇಮಕ

ಧೈರ್ಯದ ದಾರಿ

**ದೇವದುರ್ಗ,ಡಿ.19–** ವೀರಗೋಟದಲ್ಲಿ ನಡೆದ ಪದಗ್ರಹಣ ಕಾರ್ಯಕ್ರಮದಲ್ಲಿ ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾ ಸಮಿತಿಯ ಜಿಲ್ಲಾಧ್ಯಕ್ಷರಾದ ರವಿ ನಾಯಕ ಮಾಕಾಪುರ ಹಾಗೂ ಜಿಲ್ಲಾ ಕಾರ್ಯಾಧ್ಯಕ್ಷರಾದ ಶಿವರಾಯ ನಾಯಕ ಯಮನಾಳ ರವರ ನೇತೃತ್ವದಲ್ಲಿ ವೀರಗೋಟ ಮೌನೇಶ್ವರ ದೇವಸ್ಥಾನದಲ್ಲಿ ಜರುಗಿತು. ಈ ಸಂದರ್ಭದಲ್ಲಿ ಜಿಲ್ಲಾ ಗೌರವ ಸಲಹೆಗಾರರನ್ನಾಗಿ ನರಸಣ್ಣ ವಿ ಚಂಪಾ ನಾಯಕ ಜಿಲ್ಲೆಯ ಉಪಾಧ್ಯಕ್ಷರಾಗಿ ಶಿವರಾಜ ನಾಯಕ ಗೌಡುರು ಮಸ್ಕಿ ತಾಲೂಕ ಅಧ್ಯಕ್ಷರಾಗಿ ಶರಣಪ್ಪ ನಾಯಕ ನಾಗರಾಳ ಸಿಂಧನೂರು ತಾಲೂಕ ಅಧ್ಯಕ್ಷರಾಗಿ ರವೀಂದ್ರ ನಾಯಕ ದುಮತಿ ಲಿಂಗಸುಗೂರು ತಾಲೂಕ ಅಧ್ಯಕ್ಷರಾಗಿ ರಮೇಶ್ ನಾಯಕ ರವರನ್ನು ನೇಮಿಸಿ ಆದೇಶ ಪ್ರತಿಗಳನ್ನು ನೀಡಲಾಯಿತು. ಸಮಾಜದ ಅಭಿವೃದ್ಧಿಗೆ ದೀನ ದಲಿತರ ನೆರವಿಗೆ ಧಾವಿಸಿ ನ್ಯಾಯ ಒದಗಿಸಲು ನಿರಂತರವಾಗಿ ಕಾರ್ಯ ನಿರ್ವಹಿಸಬೇಕೆಂದು ಜಿಲ್ಲಾಧ್ಯಕ್ಷರು ಸಲಹೆ ನೀಡಿದರು.



# ನಂಬಿಕೆ ಇರಲಿ, ಮೌಢ್ಯ ಬೇಡ: ಡಾ. ಹುಲಿಕಲ್ ನಟರಾಜ್



**ಯಾದಗಿರಿ:ಡಿ.19–**ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು (ಏಖಖಅ) ಯಾದಗಿರಿಯಲ್ಲಿ ಆಯೋಜಿಸಲ್ಲಿರುವ ರಾಜ್ಯ ಸಮ್ಮೇಳನದ ಹಿನ್ನೆಲೆಯಲ್ಲಿ ಮತ್ತು ವೈಜ್ಞಾನಿಕ ಚಿಂತನೆಯನ್ನು ಪ್ರಚೋದಿಸಲು, ಮೂಢನಂಬಿಕೆಗಳ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸಲು, ನಕಲಿ ಮ್ಯಾಜಿಕ್ ಮತ್ತು ಸ್ವಯಂ ಘೋಷಿತ ದೇವಮಾನವರನ್ನು ಬಯಲಿಗೆಳೆಯಲು ನಡೆಸಲಾಗುತ್ತಿದೆ. ಇತ್ತೀಚೆಗೆ, ಈ ಸಮ್ಮೇಳನಕ್ಕೆ ವೈಚಾರಿಕ ಸಾಹಿತಿ ವಿಶ್ವಾರಾಧ್ಯ ಸತ್ಯಂಪೇಟೆಯನ್ನು ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ, ಮತ್ತು ಡಾ. ಹುಲಿಕಲ್ ನಟರಾಜ್ ಅವರು ಈ ಕಾರ್ಯಕ್ರಮದ ಠಿಡಿಂಟಿಚಿಣುಂಟಿ ಮತ್ತು ವೈಜ್ಞಾನಿಕ ಸಂದೇಶಗಳಿಗಾಗಿ ಯಾದಗಿರಿಯಲ್ಲಿ ಸಿದ್ದುಗೋಷ್ಠಿಯಲ್ಲಿ ಮಾತನಾಡಿದ ಅವರು

ವೈಜ್ಞಾನಿಕ ಚಿಂತನೆಯ ವಿಸ್ತಾರಕ್ಕಾಗಿ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ಡಿಸೆಂಬರ್ 28ರಿಂದ 30ರವರೆಗೆ ಯಾದಗಿರಿ ಜಿಲ್ಲಾ ಕ್ರೀಡಾಂಗಣದಲ್ಲಿ ಮೂರು ದಿನಗಳ ರಾಜ್ಯಮಟ್ಟದ ವೈಜ್ಞಾನಿಕ ಸಮ್ಮೇಳನ ಹಮ್ಮಿಕೊಂಡಿದೆ. ಸಂಸ್ಥಾಪಕ ಹಾಗೂ ಅಧ್ಯಕ್ಷ ಹುಲಿಕಲ್ ನಟರಾಜ್ ಪತ್ರಿಕಾ ಭವನದಲ್ಲಿ ಈ ಕುರಿತು ಮಾಹಿತಿ ನೀಡಿದರು. ಭಾರತ ಸರ್ಕಾರದ ಎಂಟು ವಿಜ್ಞಾನ ಕೇಂದ್ರಗಳು ಹಾಗೂ 102 ವಿಜ್ಞಾನಿಗಳು ಮೊಟ್ಟ ಮೊದಲ ಬಾರಿಗೆ ಗಿರಿ ಜಿಲ್ಲೆಗೆ ಆಗಮಿಸಲಿದ್ದಾರೆ. ವಿದ್ಯಾರ್ಥಿಗಳನ್ನು ಕೇಂದ್ರಬಿಂದುವಾಗಿಸಿಕೊಂಡು ವಿಜ್ಞಾನ ಅರಿವು ಮೂಡಿಸುವ ಉದ್ದೇಶ ಹೊಂದಿರುವ ಸಮ್ಮೇಳನಕ್ಕೆ ಮಾಧ್ಯಮ ಹಾಗೂ ಸಾರ್ವಜನಿಕರ ಸಹಕಾರ ಕೋರಿದ್ದಾರೆ . ಈ ಸಂದರ್ಭದಲ್ಲಿ ಡಿಎಸ್ಎಸ್ ಸಂಚಾಲಕ ಮರೆಪ್ಪ, ಸುರೇಶ ನಾಯಕ, ಭೀಮಣ್ಣ ಮೇಟಿ, ಗುಂಡಪ್ಪ ಕಲಬುರ್ಗಿ, ಶಾಂತವೀರ ಸ್ವಾಮೀಜಿ, ಲಕ್ಷ್ಮಣ ರಾಠೋಡ, ಹನಮೇಗೌಡ ಮಾರ್ಕಲ, ಭೀಮರಾಯ ಠಾಣಗುಂದಿ, ನಿಂಗಪ್ಪ ಹತ್ತಿಮಾನಿ ಸೇರಿದಂತೆ ಹಲವಾರು ಮುಖಂಡರು ಉಪಸ್ಥಿತರಿದ್ದರು.

ನಿರ್ಮಲ ತುಂಗಭದ್ರಾ ಅಭಿಯಾನ: ಜಲ ಜಾಗೃತಿ : ಜನಜಾಗೃತಿ ಪಾದಯಾತ್ರೆ

# ತುಂಗಭದ್ರಾ ನದಿ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ: ಎನ್.ಉದಯಕುಮಾರ ಸಾಹುಕಾರ



ಧೈರ್ಯದ ದಾರಿ

**ಮಾನ್ವಿ,ಡಿ.19–**ಜೀವ ನದಿ ತುಂಗಭದ್ರಾ ಒಡಲಿಗೆ ಭಾರಿ ಪ್ರಮಾಣದಲ್ಲಿ ವಿವಿಧ ರೀತಿಯ ತ್ಯಾಜ್ಯಗಳು, ಕೈಗಾರಿಕಾ ಕಲುಷಿತ ನೀರು ನದಿಯನ್ನು ಸೇರುತ್ತಿದ್ದು ಪ್ರಸ್ತುತ ನದಿಯ ನೀರನ್ನು ನೇರವಾಗಿ ಬಳಕೆ ಮಾಡದಂತಾಗಿದೆ. ಮುಂದಿನ ಪೀಳಿಗೆ ಗಾಗಿ ಜಲಮೂಲಗಳ ಸಂರಕ್ಷಣೆಗಾಗಿ ಒತ್ತಾಯಿಸಿ ಡಿ.27ರಿಂದ ಕಿಷ್ಕಿಂದೆಯಿಂದ ಮಂತ್ರಾಲಯದವರೆಗೆ ನಿರ್ಮಲ ತುಂಗಭ ದ್ರಾ ಅಭಿಯಾನ ಜಲ ಜಾಗೃತಿ ಜನಜಾ ಗೃತಿಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು 3ನೇ ಹಂತದ ನಿರ್ಮಲ ತುಂಗಭ ದ್ರಾ ಅಭಿಯಾನ ಸಂಚಾಲಕ ಎನ್.ಉದ ಯಕುಮಾರ ಸಾಹುಕಾರ ಹೇಳಿದರು.

ಪಟ್ಟಣದ ಬಾಲಕರ ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜಿನಲ್ಲಿ ರಾಷ್ಟ್ರೀಯ ಸ್ವಾಭಿಮಾನ ಆಂದೋಲನ ನವದೆಹಲಿ, ನಿರ್ಮಲ ತುಂಗಭದ್ರಾ ಅಭಿಯಾನ ಸಮಿತಿ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾದ ನಿರ್ಮಲ ತುಂಗಭದ್ರಾ ಅಭಿಯಾನ ಪಾದ ಯಾತ್ರೆಯ ಜಲ ಜಾಗೃತಿ –ಜನಜಾಗೃತಿ ಸಭೆಯನ್ನು ಉದ್ದೇಶಿಸಿ ಮಾಡಿದ ಅವರು ನದಿಗಳ ಮಾಲಿನ್ಯದಿಂದಾಗಿ ಜನರ ಆರೋ ೞಗ್ಯ ಮೇಲೆ ಉಂಟಾಗುವ ದುಷ್ಪರಿ ಣಾ ಮಗಳ ಗಂಭೀರತೆಯನ್ನು ಪ್ರತಿಯೊ ಬ್ಬರು ಅರಿಯಬೇಕಿದೆ. ಈ ನಿಟ್ಟಿನಲ್ಲಿ ಈ 3ನೇ ಹಂತದ ಆಂದೋಲನ ಪಾದಯಾ ತ್ರೆಯು ಒಟ್ಟು 680 ಕೀ.ಮಿ ಗಂಗಾವತಿಯ ಕಿಷ್ಕಿಂದೆಯಿಂದ ಮಂತ್ರಾಲಯದ ವರೆಗೆ ಹಮ್ಮಿಕೊಳ್ಳಲಾಗಿದೆ ಎಂದರು.

ನಂತರ ಅಭಿಯಾನ ಸಮಿತಿಯ ಸದಸ್ಯರಾದ ಅನಿತಾ ನವಲಕಲ್ ಮಾತ ನಾಡಿ, ರಾಯಚೂರು ಜಿಲ್ಲೆಯ ಒಡಲಲ್ಲಿ ಎರಡು ನದಿಗಳಾದ ಕೃಷ್ಣೆ, ತುಂಗಭದ್ರಾ ಹರಿಯುತ್ತಿದ್ದರೂ ಜಿಲ್ಲೆಯ ಜನರು ಕುಡಿ ಯುವ ನೀರಿನ ಸಮಸ್ಯೆಯನ್ನು ಎದುರಿಸುವಂತಾಗಿದೆ. ರೈತರು ಬೆಳೆಗಳಿಗೆ ನೀರಿನ ಕೊರತೆ ಕಾಣಬಹುದಾಗಿದ ಇದಕ್ಕೆಲ್ಲಾ ಪ್ರಮುಖ ಕಾರಣಗಳೆಂದರೆ ಅರಣ್ಯ ನಾಶ, ಪರಿಸರ ಮಾಲಿನ್ಯ, ಪ್ಲಾಸ್ಟಿಕ್ ತ್ಯಾಜ್ಯವನ್ನು ನದಿಯ ಒಡಲಿಗೆ ಸೇರಿಸುವದಾಗಿದೆ, ಬೃಹತ್ ಕೈಗಾರಿಕಾ ಫ್ಯಾಕ್ಟರಿಗಳ ನಿರ್ಮಾಣ ಹಾಗೂ ವಿಷಕಾರಿ ಕಲುಷಿತ ನೀರನ್ನು ನದಿಗೆ ಬಿಡಲಾಗುತ್ತದೆ. ನಮ್ಮ ಜಲಮೂಲ ನದಿಗಳ ಸಂರಕ್ಷಣೆ ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ ಆದ್ದರಿಂದ ಪಾದಯಾತ್ರೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತರ ಮನವಿ ಮಾಡಿದರು. ಸಮಿತಿಯ ಸದಸ್ಯ ರಾಘವೇಂದ್ರ ಚೌಡ್ಕಿ ಪ್ರಾಸ್ತಾವಿಕವಾಗಿ ಮಾತನಡಿ, ನದಿಯ ಮಹತ್ವ , ಪವಿತ್ರತೆ ಬಗ್ಗೆ ಹಾಡು ಆಡುವ ಮೂಲಕ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿದರು. ನಂತರ ಬಾಲಕರ ಸರ್ಕಾರಿ ಪ್ರೌಢಶಾಲೆ ಉಪಪ್ರಾಂಶುಪಾಲ ಮಹಿಬೂಬ್ ಪಾಷ ಹಾಗೂ ಶಾಲೆಂಯ ಸಹಶಿಕ್ಷಕರಾದ ಕರಿಬಸಯ್ಯಸ್ವಾಮಿ,ಎಂ.ಶಿವಾಜಿ, ರಿಯಾಜ್ ಹುಸೇನ್ ಮಾತನಾಡಿದರು.ನಂತರ ಶಿಕ್ಷಕರಿಗರ, ವಿದ್ಯಾರ್ಥಿಗಳಿಗೆ ಅಭಿಯಾನದ ಜಾಗೃತಿಯ ಬಿತ್ತಿ ಪತ್ರ,ಕರಪತ್ರಗಳನ್ನು ಹಂಚಿದರು.

ಈ ಸಂದರ್ಭದಲ್ಲಿ ನಿರ್ಮಲ ತುಂಗಭದ್ರಾ ಅಭಿಯಾನ ಸಮಿತಿ ಸದಸ್ಯರಾದ ನಾಗೇಶ ನಾಯಕ. ನಿವೇದಿತಾ.ಎನ್ ಸೇರಿದಂತೆ ಶಾಲೆಯ ಶಿಕ್ಷಕರು ಸಹ ಶಿಕ್ಷಕರು,ಉಪನ್ಯಾಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜಿಲ್ಲೆಯಲ್ಲಿ ಬೃಹತ್ ಪ್ರಮಾಣದ ಕಾನೂನು ಅರಿವು ಮತ್ತು ನೆರವು:ನ್ಯಾ.ಎಸ್.ಬಿ. ರಹಮಾನ್

**ಬೀದರ, ಡಿ.19–**ಜಿಲ್ಲೆಯಲ್ಲಿ ಬೃಹತ್ ಪ್ರಮಾಣದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ಎಸ್.ಬಿ. ರಹಮಾನ್ ಅವರು ತಿಳಿಸಿದರು.

ಅವರು ಇಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಭಾಂಗಣದಲ್ಲಿ ನಡೆದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಪೂರ್ವ ತಯಾರಿ ಸಭೆ ಉದ್ದೇಶಿಸಿ ಮಾತನಾಡಿದರು.

ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಹಾಗೂ ಬೀದರ ಜಿಲ್ಲೆಯ ಆಡಳಿತಾತ್ಮಕ ನ್ಯಾಯಮೂರ್ತಿ ಹಂಚಾಟೆ ಸಂಜೀವ್ ಕುಮಾರ್ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ನ್ಯಾ.ಶಶಿಧರ ಶೆಟ್ಟಿ ರವರ ಮೌಖಿಕ ನಿರ್ದೇಶನದಂತೆ ಬೀದರ ತಾಲೂಕಿನ ಒಂದು ಹಳ್ಳಿಯನ್ನು ಗುರುತಿಸಿ, ಹಳ್ಳಿಯ ಜನರ ಸಮಸ್ಯೆಗಳನ್ನು ಪಟ್ಟಿಮಾಡಿ ಸರ್ಕಾರ ಸೌಲಭ್ಯ ಹಾಗೂ ಕಾನೂನು ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಒಂದು ದೊಡ್ಡ ಪ್ರಮಾಣದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಮಾಡುವುದಾಗಿ ತಿಳಿಸಿದರು. ಉಚ್ಚ ನ್ಯಾಯಮೂರ್ತಿಗಳಿಂದ ದಿನಾಂಕವನ್ನು ಪಡೆದು ದಿನಾಂಕವನ್ನು ನಿರ್ಧಾರಿಸಲಾಗುವುದು. ಜಿಲ್ಲೆಯ ವಿವಿಧ ಇಲಾಖೆಗಳ ಸಹಕಾರ ಮತ್ತು ಸಹಯೋಗ ಬಹಳ ಮುಖ್ಯವಾಗಿದೆ ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಅರ್ಜುನ ಬನಸೋಡೆ ಮಾತನಾಡಿ, ಹಳ್ಳಿಯ ಜನರಿಗೆ ಇದು ಒಂದು ಉತ್ತಮ ಅವಕಾಶವಾಗಿದ್ದು, ಸ್ಥಳದಲ್ಲಿಯೇ ತಮ್ಮ ಸಮಸ್ಯೆಯನ್ನು ಬಗೆಹರಿಸಿಕೊಳ್ಳಬಹುದು. ಸರ್ಕಾರದಿಂದಿರುವ ವಿವಿಧ ಸೌಲಭ್ಯಗಳು ಹಾಗೂ ಕಾನೂನು ನೆರವು ಪಡೆದುಕೊಳ್ಳಬಹುದು ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ. ಗಿರೀಶ್ ಬದೋಲೆ ಅವರು ಮಾತನಾಡಿ, ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಸಂಬಂಧಿಸಿದಂತೆ ಒಂದು ಹಳ್ಳಿಯನ್ನು ಅಂತಿಮ ಮಾಡಿ ತಿಳಿಸಿದಲ್ಲಿ ಜಿಲ್ಲಾ ಪಂಚಾಯತ ವತಿಯಿಂದ ಆಗುವಂತಹ ಎಲ್ಲಾ ರೀತಿಯ ನೆರವು ಹಾಗೂ ಸಹಕಾರ ನೀಡಲಾಗುವುದು ಎಂದರು.



ಈ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾ ಸತ್ರ ನ್ಯಾಯಾಧೀಶರಾದ ಬಿ.ಕೆ.ಕೋಮಲ್, ಜಿಲ್ಲಾ ವಕೀಲ ಸಂಘದ ಅಧ್ಯಕ್ಷ ಸನ್ಮುಖಯ್ಯ ಸ್ವಾಮಿ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ ಸೇರಿದಂತೆ ಇತರೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.



**ಕಲಬುರಗಿ,ಡಿ.19–** ನ್ಯಾಷನಲ್ ಹರಾಲ್ಡ್ (ಯಂಗ್ ಇಂಡಿಯಾ) ಪಿತೂರಿಯ ಸುಳ್ಳು ಪ್ರಕರಣದ ಕುರಿತು ಎಐಸಿಸಿ ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ ಹಾಗೂ ರಾಹೂಲ ಗಾಂಧಿ ಅವರ ವಿರುದ್ಧ ದಾಖಲಿಸಿರುವ ಕಾನೂನು ಬಾಹಿರ ಪ್ರಕರಣವನ್ನು ಖಂಡಿಸಿ ಜಿಲ್ಲಾ ಕಾಂಗ್ರೇಸ ಸಮಿತಿ ನೆತೃತ್ವದಲ್ಲಿ ನಗರದ ಜಿಲ್ಲಾ ಬಿಜೆಪಿ ಕಚೇರಿ ಮುತ್ತಿಗೆಯ ಪ್ರತಿಭಟನೆಯಲ್ಲಿ ಕೆಕೆಆರ್‌ಟಿಸಿ ಅಧ್ಯಕ್ಷ ಅರುಣಕುಮಾರ ಪಾಟೀಲ, ರೇವು ನಾಯಕ ಬೆಳಮಗಿ, ಸುಭಾಷ ರಾಠೋಡ, ಭೀಮರಾವ ಟಿಟಿ, ರಾಜಗೋಪಾಲ ರೆಡ್ಡಿ, ಮಜರ ಆಲಂ ಖಾನ, ಪ್ರವೀಣ ಪಾಟೀಲ ಹರವಾಳ, ಸಂತೋಷ ಪಾಟೀಲ ಡನ್ನೂರ, ಚಂದ್ರಿಕಾ ಪರಮೇಶ್ವರ, ಈರಣ್ಣ ಝಳಕಿ, ರಾಜೀವ ಜಾನೆ, ಶಿವಾನಂದ ಹೊನಗುಂಟಿ, ಕಿಶೋರ ಗಾಯಕವಾಡ, ಲಾಲ ಅಹ್ಮದ ಸೇಠ, ಕಾರ್ತಿಕ ನಾಟಿಕಾರ, ರೇಣುಕಾ ಶಿಂಧೆ ಸೇರಿದಂತೆ ಕಾಂಗ್ರೆಸ ಪಕ್ಷದ ಕಾರ್ಯಕರ್ತರು ಭಾಗವಹಿಸಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE